ಸಂಪುಟ 01 । ಸಂಚಿಕೆ 39 । ಶನಿವಾರ 20 ಡಿಸೆಂಬರ್ 2025 । ಪುಟ 4 । ಬೆಲೆ-2 ರೂ.

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ, ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

ಇರ್ಫಾನ್ ಕೆ
ಸಂಪಾದಕರು

MA ವಹಾಬ್
ಪ್ರಧಾನ ಸಂಪಾದಕರು

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1. ಅಂತರರಾಷ್ಟ್ರೀಯ ಮಾನವ ಸಹಕಾರ ದಿನ
International Human Solidarity Day

ಈ ದಿನವನ್ನು ಯುನೈಟೆಡ್ ನೇಷನ್ಸ್ ಪ್ರತಿ ವರ್ಷ 20 ಡಿಸೆಂಬರ್ ರಂದು ಆಚರಿಸುತ್ತಿದೆ. ಮಾನವ ಸಹಕಾರ ಎಂಬ ಜಾಗತಿ-ಕ ಮೌಲ್ಯವನ್ನು ಸಾರುವುದು ಈ ದಿನದ ಮುಖ್ಯ ಉದ್ದೇಶ. ಇದು ಒಕ್ಕೂಟ, ಸಹಕಾರ, ಸಹಾನುಭೂತಿ ಮತ್ತು ಸಾಥಿ ಭಾವನೆ ಹೆಚ್ಚಿಸಲು ಪ್ರೇರೇಪಿಸುತ್ತದೆ. ಅತ್ಯಂತ ಗಂಭೀರ ಸವಾಲುಗಳಾದ ದಾರಿದ್ರ್ಯ ನಿರ್ಮೂಲನೆ, ಅಸಮಾನತೆ ನಿವಾರಣೆ ಮತ್ತು ಸತತ ಅಭಿವೃದ್ಧಿ ಗುರಿಗಳನ್ನು ಸಾಧಿಸಲು ಸಹಕಾರ ಸಮರ್ಥಿಸುವ ದಿನವಾಗಿದೆ. ಸರ್ಕಾರಗಳು, ಸಂಘಗಳು ಮತ್ತು ವ್ಯಕ್ತಿಗರು ಸಹಕಾರದ ಕಾರ್ಯಗಳನ್ನು, ಪ್ರಚಾರ ಅಭಿಯಾನಗಳನ್ನು ಮತ್ತು ಜನಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬಹುದು.

## ಸುಭಾಷಿತ

ಒಬ್ಬ ಒಳ್ಳೆಯ ವ್ಯಕ್ತಿಗೆ ಮೋಸ
ಮಾಡುವುದು ಎಂದರೆ ಕೈಯಲ್ಲಿರುವ
ವಜ್ರವನ್ನು ಎಸೆದು ಕಲ್ಲನ್ನು ಎತ್ತಿಕೊಂಡಂತೆ

ಡಾ.ಎ.ಪಿ.ಜೆ ಅಬ್ದುಲ್ ಕಲಾಂ

## ಕರ್ನಾಟಕದಲ್ಲಿ ಇನ್ನೂ ಐದು ದಿನ ಬೀಸಲಿದೆ ಶೀತ ಗಾಳಿ ಎಚ್ಚರಿಕೆ ಸೂಚನೆ

❑ ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ರಾಜ್ಯದಲ್ಲಿ ಮುಂದಿನ ಐದು ದಿನಗಳ ಕಾಲ ಶೀತಗಾಳಿ ಮುಂದುವರಿಯಲಿದ್ದು, ಚಳಿ ಹೆಚ್ಚಾಗಲಿದೆ ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಮಾಹಿತಿ ನೀಡಿದೆ. ಬೀದರ್, ಕಲಬುರ್ಗಿ, ಯಾದಗಿರಿ, ರಾಯಚೂರು ಜಿಲ್ಲೆಗಳಲ್ಲಿ ಶೀತಗಾಳಿ ಹೆಚ್ಚಾಗುವ ಸಾಧ್ಯತೆಯಿದೆ.



ಹವಾಮಾನ ಇಲಾಖೆ ಈ ಜಿಲ್ಲೆಗಳಿಗೆ ಯಲ್ಲೋ ಅಲರ್ಟ್ ಘೋಷಣೆ ಮಾಡಿದ್ದು, ಎಚ್ಚರಿಕೆಯಿಂದ ಇರುವಂತೆ ಸೂಚಿಸಲಾಗಿದೆ. ಇನ್ನುಳಿದ ಜಿಲ್ಲೆಗಳಲ್ಲಿ ಬೆಳಿಗ್ಗೆ ಮಂಜು ಮುಸುಕಿದ ವಾತಾವರಣ ಮತ್ತು ಸಾಧಾರಣ ಚಳಿ ಇರಲಿದ್ದು, ತುಂತುರು ಮಳೆಯಾಗುವ ಸಂಭವವಿದೆ ರಾಜ್ಯದಲ್ಲಿ ನಿನ್ನೆ ಬೀದರ್‌ನಲ್ಲಿ ಕನಿಷ್ಠ 10 ಡಿಗ್ರಿ ಸೆಲ್ಸಿಯಸ್, ಕಲಬುರಗಿಯಲ್ಲಿ 11 ಡಿಗ್ರಿ ಸೆಲ್ಸಿಯಸ್, ಬಾಗಲಕೋಟೆ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ, ಹಾವೇರಿ, ಕೋಲಾರ,ರಾಯಚೂರು, ವಿಜಯಪುರ, ತುಮಕೂರು ಜಿಲ್ಲೆಗಳಲ್ಲಿ ಕನಿಷ್ಠ ತಾಪಮಾನ 12 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಉಳಿದ ಜಿಲ್ಲೆಗಳಲ್ಲಿ ಕನಿಷ್ಠ ತಾಪಮಾನ 13, 14,16 ಡಿಗ್ರಿ ಸೆಲ್ಸಿಯಸ್ ದಾಖಲಾಗಿದ್ದು, ದಕ್ಷಿಣ ಕನ್ನಡದಲ್ಲಿ ಕನಿಷ್ಠ ತಾಪಮಾನ 20 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

## ಅಧಿಕಾರಾವಧಿ ಹಂಚಿಕೆ ಇಲ್ಲ, ಮುಂದೆಯೂ ನಾನೇ ಸಿಎಂ,

# ಹೈ ಕಮಾಂಡ್ ನನ್ನ ಪರ: ಸಿದ್ದರಾಮಯ್ಯ

ಬೆಳಗಾವಿ: ಎರಡೂವರೆ ವರ್ಷಗಳಿಗೆ ಮಾತ್ರ ಮುಖ್ಯಮಂತ್ರಿ ಹುದ್ದೆ ಎಂದು ತೀರ್ಮಾನ ವಾಗಿಲ್ಲ. ಕಾಂಗ್ರೆಸ್ ಪಕ್ಷದ ವರಿಷ್ಠರು ತೀರ್ಮಾನ ಮಾಡಿದರೆ ಮುಂದೆಯೂ ನಾನೇ ಮುಖ್ಯಮಂತ್ರಿಯಾಗಿರುತ್ತೇನೆ. ಹೈಕಮಾಂಡ್ ನನ್ನ ಪರವಾಗಿದೆ ಎಂದು ಸಿದ್ದರಾಮಯ್ಯ ಅವರು ಹೇಳುವ ಮೂಲಕ ಪ್ರಸ್ತುತ ರಾಜಕೀಯ ಬೆಳವಣಿಗೆಗಳಲ್ಲಿ ಮಹತ್ವದ ಸಂದೇಶ ರವಾನಿಸಿದ್ದಾರೆ. ಉತ್ತರ ಕರ್ನಾಟಕ ಭಾಗದ ಪ್ರದೇಶಗಳ ಅಭಿವೃದ್ಧಿಯ ಕುರಿತ ಚರ್ಚೆಗೆ ಸಿದ್ದರಾಮಯ್ಯ ಅವರು ವಿಧಾನಸಭೆಯಲ್ಲಿ ಉತ್ತರ ನೀಡುವಾಗ ಕರ್ಮ ಸಿದ್ಧಾಂತದ ಬಗ್ಗೆ ಪ್ರಸ್ತಾಪ ಮಾಡಿದರು.

ಈ ಸಂದರ್ಭದಲ್ಲಿ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಧ್ಯ ಪ್ರವೇಶಿಸಿ, ನಾವೆಲ್ಲಾ ಬ್ರಹನ ಬಳಿ ಹೆಚ್ಚು ಹೊತ್ತು ಇರದೇ ಬಂದು ಬಿಟ್ಟಿದ್ದೇವೆ. ಆದರೆ ಸಿದ್ದರಾಮಯ್ಯ ಅವರು ಬ್ರಹನ ಬಳಿ ಕುಳಿತುಕೊಂಡು 2013 ರಿಂದ 2018ರ ವರೆಗೂ 5 ವರ್ಷ ಮುಖ್ಯಮಂತ್ರಿ ಎಂದು ಖಚಿತವಾಗಿ ಬರೆಸಿಕೊಂಡು ಬಂದಿದ್ದರು. ಈಗ ಎರಡೂವರೆ ವರ್ಷ ಮಾತ್ರ ಎಂದು ಬರೆಯಲಾಗಿದೆ ಎಂದು ಕೆಣಕಿದರು. ಇದು ನಿಮಗೆ ಹೇಗೆ ಗೊತ್ತು ಎಂದು ಸಿದ್ದರಾಮಯ್ಯ ಪ್ರಶ್ನಿಸಿದಾಗ. ನೀವು ಅಧಿಕಾರ ಹಂಚಿಕೆಗೆ ಕು-ರಿತಂತೆ ದೆಹಲಿ ವಿಮಾನ ಹತ್ತುವಾಗಿನಿಂದಲೂ



ಹಿಡಿದು ತೀರ್ಮಾನವಾಗುವವರೆಗೂ ಪ್ರತಿ ಎರಡು ಗಂಟೆಗೆ ಒಮ್ಮೆ ನನಗೆ ಫೋನ್ ಕರೆಯ ಮೂಲಕ ಮಾಹಿತಿ ಬರುತ್ತಿತ್ತು. ನಿಮಗೆ ಎರಡೂವರೆ ವರ್ಷ ಎಂದು ಗಡುವು ಬರೆದಿದ್ದಾರೆ. ಅದನ್ನು ಸರಿ ಮಾಡಿಕೊಳ್ಳಿ ಎಂದು ಹೇಳಿದರು. ಇದಕ್ಕೆ ಪ್ರತಿಕ್ರಿಸಿದ ಸಿದ್ದರಾಮಯ್ಯ ನಮದು ಹೈಕಮಾಂಡ್ ಪಾರ್ಟಿ. ಮೊದಲ ಅವಧಿಗೆ 5 ವರ್ಷ ಮುಖ್ಯಮಂತ್ರಿ ಆಗಿ ಅಧಿಕಾರ ಪೂರೈಸಿದ್ದೇನೆ. ಈಗ ಹೈಕಮಾಂಡ್ ನನ್ನ ಪರವಾಗಿದೆ ಎಂದು ಸಿದ್ದರಾಮಯ್ಯ ಹೇಳಿದರು. ಇಷ್ಟೆಲ್ಲಾ ಸಮಸ್ಯೆಗಳ ನಡುವೆಯೂ ನಿಮ ಸಮರ್ಥನೆಯನ್ನು ಮೆಚ್ಚಬೇಕು ಎಂದು ಬಿಜೆಪಿಯ ಆರಗ ಜ್ಞಾನೇಂದ್ರ, ವಿ.ಸುನೀಲ್ ಕುಮಾರ್ ಮತ್ತಿತರರು ಕೆಣಕಿದರು.ಬಿಜೆಪಿಯಲ್ಲಿ ಯಡಿಯೂರಪ್ಪ ಅವರನ್ನು ಅಧಿಕಾರದಿಂದ ಕೆಳಗಿಳಿಸಿದ್ದೇಕೆ ಎಂದು ಸಿದ್ದರಾಮಯ್ಯ ಪ್ರಶ್ನಿಸಿದರು.

ಅಶೋಕ್ ಅವರಿಗೆ ವಿರೋಧ ಪಕ್ಷದ ನಾಯಕನಾಗಿ ಐದು ವರ್ಷ ಪೂರ್ಣಗೊಳಿಸುವ ವಿಶ್ವಾಸ ಇದೆಯೇ ಎಂದು ಸಿದ್ದರಾಮಯ್ಯ ಪ್ರತಿ ಸವಾಲು ಹಾಕಿದರು. ನಮಲ್ಲಿ ಅಶೋಕ್ ಐದು ವರ್ಷ ವಿರೋಧ ಪಕ್ಷದ ನಾಯಕರಾಗಿ ಇರುತ್ತಾರೆ. ನಮಗೆ ಆ ಬಗ್ಗೆ ಖಚಿತತೆ ಇದೆ. ನೀವು ಐದು ವರ್ಷ ಮುಖ್ಯಮಂತ್ರಿ ಆಗಿರುವ ವಿಶ್ವಾಸ ಇದೆಯೇ ಎಂದು ಸುನೀಲ್ ಕುಮಾರ್ ಪ್ರತಿ ಸವಾಲು ಹಾಕಿದರು. ಶಾಸಕಾಂಗ ಸಭೆಯಲ್ಲಿ ನನ್ನನ್ನು ಆಯ್ಕೆ ಮಾಡಲಾಗಿದೆ. ಅದರಂತೆ ಮುಖ್ಯಮಂತ್ರಿ ಆಗಿದ್ದೇನೆ. ಹೈಕಮಾಂಡ್ ತೀರ್ಮಾನಿಸಿದಂತೆ ನಾನೇ ಮುಖ್ಯಮಂತ್ರಿ ಆಗಿರುತ್ತೇನೆ. ಎರಡೂವರೆ ವರ್ಷ ಎಂದು ನಮಲ್ಲಿ ತೀರ್ಮಾನವಾಗಿಲ್ಲ ಎಂದು ಸಿದ್ದರಾಮಯ್ಯ ಪುನರುಚ್ಚರಿಸಿದರು. ಸಚಿವ ಕೆ.ಜೆ.ಜಾರ್ಜ್, ನಮ ಪಕ್ಷದ ವಿಚಾರ ಬಿಜೆಪಿಯವರಿಗೆ ಏಕೆ ಎಂದು ತರಾಟೆಗೆ ತೆಗೆದುಕೊಂಡರು.

ಹಿರಿಯ ಶಾಸಕ ಆರ್.ವಿ.ದೇಶಪಾಂಡೆ, ಎರಡೂವರೆ ವರ್ಷ ಅಧಿಕಾರ ಹಂಚಿಕೆಯೆಂದು ತೀರ್ಮಾನವಾಗಿಲ್ಲ ಅನವಶ್ಯಕವಾದ ಚರ್ಚೆ ಬೇಡ ಎಂದರು.

# ಡಿ. 21ರಂದು ಜಿಲ್ಲಾ ಮಟ್ಟದ ಸಿರಿಧಾನ್ಯ ಪಾಕ ಸ್ಪರ್ಧೆ



❑ ನೈಜ್ಯ ದೆಸೆ ನ್ಯೂಸ್

ಬಾಗಲಕೋಟೆ: ಪ್ರಸಕ್ತ ಸಾಲಿನ ಜಿಲ್ಲಾಮಟ್ಟದ ಸಿರಿಧಾನ್ಯಗಳ ಪ್ರಚಾರ ಮತ್ತು ಅರಿವು ಮೂಡಿಸುವ ಕಾರ್ಯಕ್ರಮದಡಿ ಸಿರಿಧಾನ್ಯ ಮತ್ತು ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆ ಏರ್ಪಡಿಸಲಾಗಿದೆ.

ಡಿ. 21ರಂದು ಬೆಳಿಗ್ಗೆ 10ಕ್ಕೆ ಸ್ಪರ್ಧೆಯನ್ನು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಆವರಣದಲ್ಲಿ ಆಯೋಜಿಸಲಾಗಿದೆ. ಸಾರ್ವಜನಿಕರು ಭಾಗವಹಿಸಲು ಅವಕಾಶವಿರುತ್ತದೆ. ವಿದ್ಯಾರ್ಥಿಗಳು, ಕೃಷಿ ಇಲಾಖೆ ಸಿಬ್ಬಂದಿಗೆ ಭಾಗವಹಿಸಲು ಅವಕಾಶ ಇರುವುದಿಲ್ಲ. ಪ್ರತಿ ಸ್ಪರ್ಧಿಗೆ ಒಂದೇ ತಿನಿಸು (ಸಿಹಿ, ಖಾರ, ದೇಸಿ ತಳಿಗಳಿಂದ ತಯಾ-ರಿಸಿದ ಖಾದ್ಯ) ಮಾಡಲು ಅವಕಾಶವಿರುತ್ತದೆ. ಸಸ್ಯಹಾರ ತಿನಿಸುಗಳಿಗೆ ಮಾತ್ರ ಅವಕಾಶವಿದೆ. ಮನೆಯಲ್ಲಿಯೇ ತಯಾರಿಸಿದ ಸಿರಿಧಾನ್ಯ ತಿನಿಸು ಪ್ರದರ್ಶಿಸಬೇಕು. ಅಡುಗೆಗೆ ಬಳಸಿದ ಪದಾರ್ಥಗಳ ಮಾದರಿಗಳನ್ನು ಪ್ರದರ್ಶಿಸುವುದು (ವಿಶೇಷವಾಗಿ ದೇಸಿ ತಳಿಗಳು) ಕಡ್ಡಾಯ.

ಸ್ಪರ್ಧೆಯಲ್ಲಿ ಭಾಗವಹಿಸುವವರು ಸ್ವತಃ ತಿನಿಸನ್ನು ಅವಶ್ಯವಿರುವ ಸಾಮಗ್ರಿಗಳೊಂದಿಗೆ ತಯಾರಿಸಲು ಸಿದ್ಧ-ರಿರಬೇಕು. ತೀರ್ಪುಗಾರರ ನಿರ್ಧಾರವೇ ಅಂತಿಮ. ತಯಾರಿಸಿದ ತಿನಿಸುಗಳ ಪ್ರದರ್ಶನ, ತಯಾರಿಕೆಗೆ ಬಳಸಿದ ಪದಾರ್ಥಗಳು, ತೋರಿಕೆ, ರುಚಿ, ಸುವಾಸನೆ ಮೇಲೆ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು. 5 ಸಾವಿರ (ಪ್ರಥಮ), 3 ಸಾವಿರ (ದ್ವಿತೀಯ) ಹಾಗೂ 2 ಸಾವಿರ (ತೃತೀಯ) ಬಹುಮಾನ ನೀಡಲಾಗುವುದು.

ಭಾಗವಹಿಸಲು ಆಸಕ್ತರು ತಮ್ಮ ಹೆಸರನ್ನು ಡಿ. 20ರ ಸಂಜೆ 5ರೊಳಗೆ ತಮ್ಮ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿ, ರೈತ ಸಂಪರ್ಕ ಕೇಂದ್ರಗಳಲ್ಲಿ ಆಧಾರ್ ಕಾರ್ಡ್ ಪ್ರತಿಯೊಂದಿಗೆ ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಿ ನೋಂದಾಯಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕ ರುದ್ರೇಶಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನವರಿಯಲ್ಲಿ ಯಡ್ರಾಮಿಗೆ ಮುಖ್ಯಮಂತ್ರಿ: ಸ್ಥಳ ಪರಿಶೀಲನೆ

❑ ನೈಜ್ಯ ದೆಸೆ ನ್ಯೂಸ್

ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಕೆಕೆಆರ್‌ಡಿಬಿ ಅನುದಾನದಲ್ಲಿ ನಿರ್ಮಿಸಲಾಗುವ 'ಪ್ರಜಾ ಸೌಧ' ಕಟ್ಟಡಗಳ ಶಂಕುಸ್ಥಾಪನೆ ನೆರವೇ-ರಿಸಲು ಜನವರಿಯಲ್ಲಿ ಯಡ್ರಾಮಿ ಪಟ್ಟಣ-ಕ್ಕೆ ಮುಖ್ಯಮಂತ್ರಿ ಆಗಮಿಸುವ ಹಿನ್ನೆಲೆಯಲ್ಲಿ ಇತ್ತೀಚೆಗೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಯಡ್ರಾಮಿ ಪಟ್ಟಣಕ್ಕೆ ಭೇಟಿ ನೀಡಿ ಕಾರ್ಯಕ್ರಮ ನಡೆಯುವ ಸ್ಥಳ ಪರಿಶೀಲಿಸಿದರು.



ಕಲಬುರಗಿ ಉಪ ವಿಭಾಗಾಧಿಕಾರಿ ಸಾಹಿತ್ಯ, ಯಡ್ರಾಮಿ ತಹಶೀಲ್ದಾರ್ ಯಲ್ಲಪ್ಪ ಸುಬೇದಾರ ಸೇರಿದಂತೆ ತಾಲ್ಲೂಕು ಅಧಿಕಾ-ರಿಗಳೊಂದಿಗೆ ಯಡ್ರಾಮಿ ಪಟ್ಟಣದಲ್ಲಿ ಸರ್ಕಾರಿ ಪ್ರೌಢ ಶಾಲೆ ಆವರಣ ಸ್ಥಳ ಪರಿಶೀಲಿಸಿದ ಅವರು, ಯಾವುದೇ ಲೋಪವಿಲ್ಲದಂತೆ ಕಾರ್ಯಕ್ರಮ ಅಚ್ಚುಕಟ್ಟಾಗಿ ನೆರವೇರಿಸಲು ಎಲ್ಲಾ ರೀತಿಯ ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಸೂಚಿಸಿದರು. ಅಲ್ಲದೇ ಹೆಲಿಪ್ಯಾಡ್ ಸ್ಥಳ ಪರಿಶೀಲಿಸಿದರು. ತದನಂತರ ಯಡ್ರಾಮಿ ಪಟ್ಟಣದ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ರೈತರ ಸಮಸ್ಯೆ ಆಲಿಸಿದರು. ಅಂಬೇಡ್ಕರ್ ವಸತಿನಿಲಯಕ್ಕೆ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ತಾಲ್ಲೂಕು ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಜನರ ಸಮಸ್ಯೆಗಳನ್ನು ಪ್ರಥಮಾದ್ಯತೆ ಮೇಲೆ ಪರಿಹರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಪಟ್ಟಣದಲ್ಲಿ ನಗರೋತ್ಥಾನ ಯೋಜನೆಯಡಿ ನಡೆಯುತ್ತಿರುವ ರಸ್ತೆ ಕಾಮಗಾ-ರಿಗಳ ಗುಣಮಟ್ಟ ಸಹ ಜಿಲ್ಲಾಧಿಕಾರಿ ಪರಿಶೀಲಿಸಿದರು. ಇದಕ್ಕೂ ಮುನ್ನ ಜವಳಗಾ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಕೆಲಹೊತ್ತು ಚಿಣ್ಣರೊಂದಿಗೆ ಸಮಯ ಕಳೆದರು. ಆಲೂರು ಗ್ರಾಮದ ಕಾಟನ್ ಮಾರುಕಟ್ಟೆಗೆ ಭೇಟಿ ನೀಡಿ ಹತ್ತಿ ಬೆಳೆಗಾರರು ಅನುಭವಿಸುತ್ತಿರುವ ಸಮಸ್ಯೆಗಳನ್ನು ಆಲಿಸಿದರು. ಅರಳಗುಂಡಗಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಅಲ್ಲಿ ನೀಡಲಾಗುತ್ತಿರುವ ವೈದ್ಯಕೀಯ ಚಿಕಿತ್ಸೆ ಕುರಿತು ರೋಗಿಗಳಿಂದ ಮಾಹಿತಿ ಪಡೆದರು.

# ಮಸ್ಕಿಯಲ್ಲಿ ಶಾಸಕ ಆರ್. ಬಸನಗೌಡ ಸುದ್ದಿಗೋಷ್ಠಿ 5ಎ ನಾಲೆ ಯೋಜನೆ ಅನುಮೋದನೆ, ಸಿಹಿ ತಿನ್ನಿಸಿ ಸಂಭ್ರಮ

## ಕಾಂಗ್ರೆಸ್ ಪಕ್ಷ ಎನ್ನಾರ್ಬಿಸಿ 5ಎ ಯೋಜನೆಗೆ ಶೀಘ್ರದಲ್ಲಿ ಟೆಂಡರ್ ಕರೆದು ರೈತರಿಗೆ ಕೊಟ್ಟ ಗ್ಯಾರಂಟಿಯಂತೆ ನಡೆದುಕೊಳ್ಳಲಿದೆ :ಶಾಸಕ ಬಸನಗೌಡ ತುರವಿಹಾಳ

❑ ನೈಜ್ಯ ದೆಸೆ ನ್ಯೂಸ್

ಮಸ್ಕಿ: ರೈತರ ಬಹು ದಿನಗಳ ಬೇಡಿಕೆಯಾಗಿರುವ ಎನ್ನಾರ್ಬಿಸಿ 5ಎ ಪಾಮನಕೆಲ್ಲೂರು ಶಾಖ ಕಾಲುವೆ ಯೋಜನೆ ಅನುಷ್ಠಾನಕ್ಕೆ ಸಚಿವ ಸಂಪುಟದಲ್ಲಿ 990 ಕೋಟಿಗೆ ಅನುಮೋದನೆ ದೊರೆತಿದ್ದು ಟೆಂಡರ್ ಕರೆಯುವ ಹಂತದಲ್ಲಿದೆ ಎಂದು ಖಾದಿ ಮತ್ತು ಗ್ರಾಮದ್ಯೋಗ ಮಂಡಳಿ ಅಧ್ಯಕ್ಷ ಹಾಗೂ ಶಾಸಕ ಆರ್.ಬಸನಗೌಡ ತುರವಿಹಾಳ ಹೇಳಿದರು.

ಮಸ್ಕಿ ಪಟ್ಟಣದ ಬಸವೇಶ್ವರ ನಗರದಲ್ಲಿರುವ ಶಾಸಕರ ಕಾರ್ಯಾಲದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಮಸ್ಕಿ ಕ್ಷೇತ್ರದಲ್ಲಿ ಈ ಹಿಂದೆ ಅಧಿಕಾರ ನಡೆಸಿದವರು ರೈತರ ಪರ ಕಾಳಜಿ ವಹಿಸದೆ ನಿರ್ಲಕ್ಷ ಮಾಡಿದ್ದರಿಂದ ನಿಮ್ಮನ್ನು ಕ್ಷೇತ್ರದ ಜನರು ವಿರೋಧ ಪಕ್ಷದಲ್ಲಿ ಕೂಡಿಸಿದ್ದಾರೆ. ಜನರಿಗೆ ದಾರಿ ತಪ್ಪಿಸುವ ಕೆಲಸ ಬಿಡಬೇಕು ನಾವು ಕ್ಷೇತ್ರದ ಜನತೆಗೆ ಕೊಟ್ಟ ಮಾತಿನಂತೆ ಯೋಜನೆ ಜಾರಿ ಮಾಡಿದ್ದೇವೆ. ಕೆಲ ತಾಂತ್ರಿಕ ಸಮಸ್ಯೆಯಿಂದ ನಾಲ್ಕೇದು ತಿಂಗಳು ವಿಳಂಬವಾಗಿತ್ತು ಇದೀಗ ಎಲ್ಲ ಸಮಸ್ಯೆಗಳು ಸರಿಯಾಗಿದೆ ಆದ್ದರಿಂದ ಬೇಗ ಟೆಂಡರ್ ಪ್ರಕ್ರಿಯೆ ಮುಗಿಯಲಿದೆ ಎಂದರು. ಈ ಯೋಜನೆಗಾಗಿ ಎನ್. ಎಸ್. ಬೋಸರಾಜ್,



ಅಮರೇಗೌಡ ಭಯ್ಯಾಪುರ ಅವರು ಪ್ರತಿ ವಾರಕ್ಕೊಮ್ಮೆ ಸಂಬಂಧ ಪಟ್ಟ ಇಲಾಖೆ ಸಚಿವರಿಗೆ ಹಾಗೂ ಅಧಿಕಾ-ರಿಗಳಿಗೆ ಭೇಟಿಯಾಗಿ ಪ್ರಯತ್ನ ಮಾದಿದ್ದೇವೆ ಎಂದರು.

ಇದೀಗ ಕಾಂಗ್ರೆಸ್ ಸರ್ಕಾರ ಬೆಳಗಾವಿಯಲ್ಲಿ ನಡೆದ ಚಳಿಗಾಲದ ಅಧಿವೇಶದಲ್ಲಿ ಉತ್ತರ ಕರ್ನಾಟಕದ ಹಲವಾರು ಸಮಸ್ಯೆಗಳಿಗೆ ಸ್ಪಂಧಿಸಿರುವ ಮುಖ್ಯಮಂತ್ರಿಗಳು ಈ ಭಾಗದ ಬಹುದಿನದ ರೈತರ ಭೇಡಿಕೆಯಾದ ಎನ್ನಾರ್ಬಿಸಿ 5ಎ ಕಾಲುವೆ ಯೋಜನೆ ಚಾಲನೆಗೆ ಅನುಮೋದನೆ ನೀಡಿದ್ದಾರೆ. ಒಂದು ತಿಂಗಳೊಳಗೆ ಟೆಂಡರ್ ಪ್ರಕ್ರಿಯೆ ಮುಗಿದು ಕಾಮಗಾರಿ ಆರಂಭವಾಗಲಿದೆ ಎಂದರು. ಉಪ ಚುನಾವಣೆ ಮತ್ತು 2023ರ ಸಾರ್ವತ್ರಿಕ ಚುನಾವಣೆಯಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ 5ಎ ಕಾಲುವೆ ಯೋಜನೆಯನ್ನು ಜಾರಿಗೊಳಿಸುತ್ತೇವೆಂದು ಸಿದ್ದರಾಮಯ್ಯ ಮತ್ತು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ ಕ್ಷೇತ್ರದ ಜನಕ್ಕೆ ಮಾತು ಕೊಟ್ಟಿದ್ದರು. ಕೊಟ್ಟ ಮಾತಿನಂತೆ ಇಂದು ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿನಡೆದುಕೊಂಡಿದ್ದಾರೆ.

**ಮಸ್ಕಿ ವಿಧಾನಸಭಾ ಕ್ಷೇತ್ರದ 5ಎ ನಾಲೆ ನೀರಾವರಿ ಯೋಜನೆಗೆ ಬೆಳಗಾವಿ ಅಧಿವೇಶನದ ಸಚಿವ ಸಂಪುಟದಲ್ಲಿ ಅನುಮೋದನೆ ದೊರೆತಿದ್ದು, 990 ಕೋಟಿ ರೂಪಾಯಿಗಳ ಟೆಂಡರ್ ಪ್ರಕ್ರಿಯೆ ಶೀಘ್ರದಲ್ಲಿ ನಡೆಯಲಿದೆ.- ಶಾಸಕ ಆರ್ ಬಸನಗೌಡ ತುರುವಿಹಾಳ.**

ಕಾಂಗ್ರೆಸ್ ಸರ್ಕಾರ ರಾಜ್ಯದ ಜನತೆಗೆ ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಿದೆ ಎಂದು ಹೇಳಿದರು.

ಸಮುದಾಯ ಆರೋಗ್ಯ ಕೇಂದ್ರದ ಜಾಗದ ಸಮಸ್ಯೆ ಇತ್ತು ಇದೀಗ ಅದು ಬಗೆಹ-ರಿಯುವ ಅಂತಕ್ಕೆ ಬಂದಿದೆ. ಆರೋಗ್ಯ ಮಂತ್ರಿಗಳ ಜತೆ ಚರ್ಚಿಸಲಾಗಿದ್ದು, ಮುಂದಿನ ದಿನಗಳಲ್ಲಿ ಸರ್ಕಾರ ಜಾಗ ವಶಕ್ಕೆ ಪಡೆಯಲಿದೆ. ನಂತರ ಆಸ್ಪತ್ರೆಗೆ ಬೇಕಾದ ಸಕಲ ಸೌಲಭ್ಯಗಳು ಕಲ್ಪಿಸಲಾಗುವುದು ಎಂದು ಆರೋಗ್ಯ ಸಚಿವರು ಭರವಸೆ ನೀಡಿದ್ದಾರೆ. ಮಸ್ಕಿ ತಾಲೂಕಿಗೆ ಪೂರ್ಣ ಪ್ರಮಾಣದಲ್ಲಿ ಕೋರ್ಟ್ ಕಲಾಪ ನಡೆಸಲು ಒತ್ತಾಯಿಸಲಾಗಿದ್ದು, ಆರ್ಥಿಕ ಇಲಾಖೆಯಲ್ಲಿ ಫೈನಲ್ ಹಂತಕ್ಕೆ ಇದೆ. ಹೊಸ ಕೋರ್ಟ್ ಕಟ್ಟಡಕ್ಕೆ ಸ್ಥಳ ಗುರುತಿಸಲಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ್ ಯದ್ದಲದಿನ್ನಿ ಮಾತನಾಡಿ ಉಪ ಚುನಾವಣೆ ಸಂದರ್ಭದಲ್ಲಿ ನಾವು ವಿರೋಧ ಪಕ್ಷದಲ್ಲಿ ಇದ್ದೇವು ಆಗ ಮಾತು ಕೊಟ್ಟಂತೆ ನಾವು ಅಲ್ಲಿಂದ ಚುನಾವಣೆ ಪ್ರಚಾರ ಆರಂಭ ಮಾಡಿದೆವು ಕ್ಷೇತ್ರದ ಅಭಿವೃದ್ಧಿಗೆ ಶಾಸಕರ ಇಚ್ಛಾಶಕ್ತಿ ಇರಬೇಕು ಅದು ನಮ್ಮ ಶಾಸಕರು ಮಾಡಿದ್ದಾರೆ ಎಂದರು.

ಸಿಹಿ ತಿನ್ನಿಸಿ ಸಂಭ್ರಮ: ಮಸ್ಕಿ ವಿಧಾನ ಸಭಾ ಕ್ಷೇತ್ರಕ್ಕೆ ಕಾಂಗ್ರೆಸ್ ಸರ್ಕಾರ ಕೊಟ್ಟ ಮಾತಿನಂತೆ ನಡೆದುಕೊಂಡು 5ಎ ನಾಲೆ ಯೋಜನೆ ಅನುಮೋದನೆ ನೀಡಿದ್ದರಿಂದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ್ ಹಾಗೂ ಇನ್ನಿತರ ಕಾಂಗ್ರೆಸ್ ಮುಖಂಡರು ಶಾಸಕ ಆರ್. ಬಸನಗೌಡ ಅವರಿಗೆ ಸಿಹಿ ತಿನ್ನಿಸಿ ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಗ್ರಾಮಿಣ ಘಟಕದ ಅಧ್ಯಕ್ಷ ಹನುಮಂತಪ್ಪ ಮುದ್ದಾಪೂರು, ನಿರುಪಾದೆಪ್ಪ ವಕೀಲರು ಗುಡಿಹಾಳ, ಅಂ-ದಾನಪ್ಪ ಗುಂಡಳ್ಳಿ, ಮೈಬುಸಾಬ ಮುದ್ದಾಪೂರ, ಪಂಪಾಪತಿ ಗುಡದೂರು, ಬಸನಗೌಡ ಪೊಲೀಸ್ ಪಾಟೀಲ್, ಎಂ. ಅಮರೇಶ ಮಸ್ಕಿ, ನಾಗಭೂಷಣ್, ಮಲ್ಲಯ್ಯ ಮುರಾರಿ, ಕೃಷ್ಣ ಚಿಗರಿ, ಆನಂದ, ನಾಗರಾಜ ಗುಡಿಸಲಿ ಸೇರಿದಂತೆ ಇನ್ನಿತರರಿದ್ದರು.

## ಸಾಹಿತ್ಯ ಸಿಂಚನ

ಮುಂಜಾನೆ ಬಾನಿನ ಕೆಂಪು
ಬಿರಿದ ಮಲ್ಲಿಗೆಯ ಕಂಪು
ಸುರಿವ ಚಂದ್ರಕಾಂತಿ ತಂಪು
ಕೋಗಿಲೆ ಸುಸ್ವರದ ಇಂಪು.!

ಗೆಳತಿ ಕವಿತೆಯೆಂದರೆ...
ಮಿನುಗುವ ಇಬ್ಬನಿ ಮುತ್ತು
ಸುಮದ ಮಕರಂದ ತುತ್ತು
ಸಾಗರದಾಳದ ಸಿರಿ ಸೊತ್ತು
ಆ ಕಾಮನಬಿಲ್ಲಿನ ಹೊತ್ತು.!

ಗೆಳತಿ ಕವಿತೆಯೆಂದರೆ...
ಕಡಲ ಅಲೆಗಳ ಭವ್ಯ ನರ್ತನ
ಹೊನಲ ಮಂಜುಳ ಕೀರ್ತನ
ದೇಗುಲದ ದಿವ್ಯ ಮಂತ್ರಗಾನ
ಮುಗಿಲ ಮೇಲಿನ ರಮ್ಯಯಾನ

ಗೆಳತಿ ಕವಿತೆಯೆಂದರೆ...
ಮುಸ್ಸಂಜೆ ಮೋಡದ ಚಿತ್ತಾರ
ಮಯೂರ ನಾಟ್ಯದ ಸಹಸ್ರಾರ
ಮಾರುತಕೆ ತೂಗುವ ಮಂದಾರ
ರತಿ-ಮನ್ಮಥರ ಪ್ರೇಮಶೃಂಗಾರ.!

ಗೆಳತಿ ಕವಿತೆಯೆಂದರೆ...
ಅಮ್ಮನ ಮಡಿಲಿನ ಜೋಗುಳ
ಒಲಿದ ಒಡಲಿನ ಯುಗಳ
ಕಂದನ ಕಂಗಳಿನ ತಿಂಗಳ
ಹೃದ್ಯ ವೀಣೆಯ ರಾಗತಾಳ.!

ಗೆಳತಿ ಕವಿತೆಯೆಂದರೆ...
ಕೋಟಿಭಾವಗಳ ರಾಗಲಹರಿ
ಸಹಸ್ರಚೈತನ್ಯಗಳ ಜೀವಪ್ರಹರಿ
ಅನಂತ ಒಲವಿನ ಮಾಯಾಭೇರಿ
ಶ್ಯಾಮನುಸುರಿನ ದೇವಬಾಸುರಿ.!

ಗೆಳತಿ ನನಗೆ ಕವಿತೆಯೆಂದರೆ..
ಜಗದ ಸಮಸ್ತ ಚೆಲುವಿನ ಸಾರ
ಕವಿಯ ಗೆಲುವಿನ ಅನನ್ಯ ಹಾರ
ಎದೆಗಳ ಬೆಸೆವ ಅಪೂರ್ವ ದಾರ
ಮನದಂಗಳ ಬೆಳಗುವ ನಕ್ಷತ್ರತಾರ.!

ಎ.ಎನ್.ರಮೇಶ್. ಗುಬ್ಬಿ.

# ವಿಶಾಖಪಟ್ಟಣ-ಮಹೆಬೂಬ್ ನಗರ ರೈಲು ರಾಯಚೂರುವರೆಗೆ ವಿಸ್ತರಿಸುವಂತೆ ಕೇಂದ್ರ ರೈಲ್ವೆ ಸಚಿವರಿಗೆ ಸಂಸದ ಜಿ ಕುಮಾರ ನಾಯಕ ಮನವಿ

❑ ನೈಜ್ಯ ದೆಸೆ ನ್ಯೂಸ್

**ವಿಶಾಖಪಟ್ಟಣದಿಂದ ಮೆಹಬೂಬ್ ನಗರ ನಡುವೆ ಪ್ರತಿ ದಿನ ಓಡಾಡುತ್ತಿರುವ ರೈಲನ್ನು ರಾಯಚೂರವರೆಗೆ ವಿಸ್ತರಿಸುವಂತೆ ರಾಯಚೂರು ಲೋಕಸಭಾ ಕ್ಷೇತ್ರದ ಸಂಸದ ಜಿ.ಕುಮಾರ ನಾಯಕ ಹಾಗೂ ತೆಲಂಗಾಣದ ಮಹಿಬೂಬ್ ನಗರ ಸಂಸದರಾದ ಡಿ.ಕೆ. ಅರುಣ ಅವರು ಕೇಂದ್ರದ ರೈಲ್ವೆ ಸಚಿವ ಶ್ರೀ ಅಶ್ವಿನ್ ವೈಷ್ಣವ ಅವರಿಗೆ ಮನವಿ ಸಲ್ಲಿಸಿದ್ದಾರೆ.**

ವಿಶಾಖಪಟ್ಟಣದಿಂದ ಮೆಹಬೂಬ್ ನಗರ ನಡುವೆ ಪ್ರತಿದಿನ ಓಡಾಡುತ್ತಿರುವ ರೈಲನ್ನು ರಾಯಚೂರ ವರೆಗೆ ವಿಸ್ತರಿಸಬೇಕು. ಇದರಿಂದಾಗಿ ಈ ಭಾಗದ ಪ್ರಯಾಣಿಕ-ರಿಗೆ ಅನುಕೂಲವಾಗುವುದರ ಜೊತೆಗೆ ರೈಲ್ವೆ ಇಲಾಖೆಗೆ ಹೆಚ್ಚಿನ ಆದಾಯ ಬರಲಿದೆ ಎಂದು ರಾಯಚೂರ ಜಿಲ್ಲಾ ಕಮ್ಮಾ ಸಮಾಜದ ಜಿಲ್ಲಾಧ್ಯಕ್ಷರಾದ ಪ್ರಸಾದ್ ಮಾಜಿ ಅಧ್ಯಕ್ಷರಾದ ಆನಂದ್, ಕೊಂಡಯ್ಯ, ರಮೇಶ್ ಬೋಸ್ ಸೇರಿದಂತೆ ಇನ್ನಿತರ ಮುಖಂಡರು ನವದೆಹಲಿಗೆ ತೆರಳಿ ಈ ಸಂಬಂಧ ಕೇಂದ್ರ ರೈಲ್ವೆ ಸಚಿವರಲ್ಲಿ ಮನವಿ ಮಾಡಿದ್ದರು.

ರಾಯಚೂರು ಲೋಕಸಭಾ ಕ್ಷೇತ್ರದ ಸಂಸದರಾದ ಜಿ ಕುಮಾರನಾಯಕ ಮತ್ತು




ಮಹಿಬೂಬ್ ನಗರ್ ಲೋಕಸಭಾ ಸದಸ್ಯರಾದ ಡಿ.ಅರುಣ ಅವರಿಗೆ ಭೇಟಿ ಮಾಡಿ ರೈಲು ವಿಸ್ತರಣೆಯ ಬಗ್ಗೆ ಮಾಹಿತಿ ನೀಡಿದರು. ಇದನ್ನು ತಕ್ಷಣ ಪರಿಗಣನೆಗೆ ತೆಗೆದುಕೊಂಡ ಉಭಯ ಲೋಕಸಭಾ ಸದಸ್ಯರು ತಕ್ಷಣ ನಿಯೋಗಕ್ಕೆ ರೈಲ್ವೆ ಮಂತ್ರಿ ಅಶ್ವಿನ್ ವೈಷ್ಣವ ಅವರಿಗೆ ಭೇಟಿ ಮಾಡಿಸಿದರು. ಕಮ್ಮಾ ಸಮಾಜದ ಮನವಿ ಆಲಿಸಿದ ಸಚಿವರು ಇಬ್ಬರು ಲೋಕಸಭಾ ಸದಸ್ಯರು ಲಿಖಿತವಾಗಿ ಈ ರೈಲು ಒದಗಿಸುವಂತೆ ಮನವಿ ಪತ್ರ ನೀಡಿದರೆ, ತಕ್ಷಣ ಕ್ರಮ ಜರುಗಿಸುವುದಾಗಿ, ಭರವಸೆ ನೀಡಿದರು. ಸದ್ಯ ಈ ರೈಲು ವಿಶಾಖಪಟ್ಟಣ ಮೂಲಕ ಬಂದು ಮಹಬೂಬನಗರ ನಗರದಲ್ಲಿ ಬೆಳಗ್ಗೆ 9:30 ಗಂಟೆಯಿಂದ ವೃಥಾ ನಿಲ್ಲುತ್ತದೆ ಇದರಿಂದ ಇತರ ರೈಲುಗಳ ಓಡಾಟಕ್ಕೆ ಅಡಚಣೆಯಾಗುತ್ತದೆ.

ಇದನ್ನು ರಾಯಚೂರವರೆಗೆ ವಿಸ್ತರಿಸಿ ಪ್ರಯಾಣಿಕರಿಗೆ ಅನುಕೂಲ ಮಾಡಿಕೊಡುವುದರ ಜೊತೆಗೆ ಇಲಾಖೆಗೆ ಆದಾಯದ ಮೂಲ ಗಟ್ಟಿಪಡಿಸಿಕೊಳ್ಳಬೇಕು ಎಂದರು. ಈ ರೈಲು ಮಕ್ತಲ, ಕೃಷ್ಣಾ ಮೂಲಕ ರಾಯಚೂರಗೆ 12:00ಗೆ ಬರುತ್ತದೆ ಒಂದು ತಾಸು ಇಲ್ಲಿ ನಿಲುಗಡಿಯಾದರೂ, ಮತ್ತೆ 3:00ಗೆ ಮಹಬೂನಗರ ತಲುಪಿ ಅಲ್ಲಿಂದ ವಿಶಾಖಪಟ್ಟಣಕ್ಕೆ ತೆರಳಲು ಸಮಯಾವಕಾಶವಿದೆ. ಮತ್ತೆ ಸಂಜೆ 4: ಗಂಟೆಗೆ ವಿಶಾಖಪಟ್ಟ-ಣಂ ಕಡೆಗೆ ಪ್ರಯಾಣ ಬೆಳೆಸಬಹುದು ಎಂದು ಮಾಹಿತಿ ನೀಡಿದರು. ಈ ರೈಲಿನ ಸಂಖ್ಯೆಯು 1 2861 ಮತ್ತು 12862 ಆಗಿದೆ.

ವಿಶಾಖಪಟ್ಟಣಂ ಈ ರೈಲು ಮೂರು ರಾಜ್ಯಗಳನ್ನು ಹಾದು ಹೋಗುತ್ತದೆ ಇದು ಅಲ್ಲದೆ ಪವಿತ್ರ ಧರ್ಮಸ್ಥಳದ ಅನ್ನಾವರಂ ಮತ್ತು ಸಿಂಹಾಚಲಂ ಬರುತ್ತದೆ ಇದ-ರಿಂದ ಭಕ್ತರಿಗೆ ಅನುಕೂಲವಾಗುತ್ತದೆ ಎಂದು ರಾಯಚೂರು ನಗರ ಹಿರಿಯ ನಾಗ-ರಿಕರಾದ ಎಸ್. ನಾಗೇಶ್ವರರಾವ್ ಮತ್ತು ಕೃಷ್ಣ ಗ್ರಾಮದ ಅರ್ಚಕರಾದ ಮತ್ತು ಗಡಿನಾಡು ಕನ್ನಡಿಗ ಹೋರಾಟಗಾರರಾದ ಅಮರ ದೀಕ್ಷಿತ ಅವರು ಮನವಿ ಮಾಡಿದ್ದಾರೆ.

# 'UGC NET' 2025 ಪರೀಕ್ಷೆಯ ವೇಳಾಪಟ್ಟಿ ಬಿಡುಗಡೆ



राष्ट्रीय परीक्षा एजेंसी
National Testing Agency
विश्वविद्यालय अनुदान आ...
University Grants Commiss...
Quality higher education fo...
(उच्चतर शिक्षा विभाग, शिक्षा मंत्रालय, भारत सरकार के तहत एक स्वायत्त संगठन)
(An Autonomous Organization under the Department of Higher Education, Ministry of Education, Government of India)

PUBLIC NOTICE
17 December 2025

Subject: Subject-wise Schedule of UGC-NET December 2025 examination – reg.

The National Testing Agency (NTA) will conduct the UGC-NET December 2025 examination in Computer Based Test (CBT) mode from 31st December 2025 to 07th January 2026.

The Subject wise schedule of the examination is given at Annexure - I.

The notification regarding intimation of City of Exam Centre will be displayed on the NTA website 10 days prior to the examination.

❑ ನೈಜ್ಯ ದೆಸೆ ನ್ಯೂಸ್

**ವಿಶ್ವವಿದ್ಯಾಲಯ ಧನಸಹಾಯ ಆಯೋಗ (UGC) ಡಿಸೆಂಬರ್ 2025 ರ ರಾಷ್ಟ್ರೀಯ ಅರ್ಹತಾ ಪರೀಕ್ಷೆ (UGC-NET) ಲಿಖಿತ ಪರೀಕ್ಷೆಗಳ ದಿನಾಂಕಗಳನ್ನು ಪ್ರಕಟಿಸಿದೆ. ಈ ನಿಟ್ಟಿನಲ್ಲಿ, ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ವಿಷಯವಾರು ಪರೀಕ್ಷಾ ವೇಳಾಪಟ್ಟಿಯನ್ನು ಬಿಡುಗಡೆ ಮಾಡಿದೆ. ಓಖಿಂ ಈ ವರ್ಷದ ಅಕ್ಟೋಬರ್‌ನಲ್ಲಿ ಪರೀಕ್ಷಾ ದಿನಾಂಕಗಳನ್ನು ಘೋಷಿಸಿದ್ದರೂ, ಇತ್ತೀಚೆಗೆ ವಿಷಯಗಳ ಪ್ರಕಾರ ಪರೀಕ್ಷಾ ದಿನಾಂಕಗಳನ್ನು ಬಿಡುಗಡೆ ಮಾಡಿದೆ.**

NTA ಯ ಇತ್ತೀಚಿನ ವೇಳಾಪಟ್ಟಿಯ ಪ್ರಕಾರ, UGC NET ಡಿಸೆಂಬರ್ 2025 ಪರೀಕ್ಷೆಗಳು ಡಿಸೆಂಬರ್ 31 ರಿಂದ ಜನವರಿ 7 ರವರೆಗೆ ಆನ್ಲೈನ್‌ನಲ್ಲಿ ನಡೆಯಲಿವೆ. ಈ ಪರೀಕ್ಷೆಗಳನ್ನು ಒಟ್ಟು 85 ವಿಷಯಗಳಿಗೆ ನಡೆಸಲಾಗುವುದು. ಈ ಪರೀಕ್ಷೆಯನ್ನು ವರ್ಷಕ್ಕೆ ಎರಡು ಬಾರಿ ನಡೆಸಲಾಗುತ್ತದೆ. ಪರೀಕ್ಷೆಗಳು ಆಯಾ ದಿನಾಂಕಗಳಲ್ಲಿ ದಿನಕ್ಕೆ ಎರಡು ಪಾಳಿಗಳಲ್ಲಿ ನಡೆಯಲಿವೆ. ಶಿಫ್ಟ್ 1 ಬೆಳಿಗ್ಗೆ 9 ರಿಂದ ಮಧ್ಯಾಹ್ನ 12 ರವರೆಗೆ ಮತ್ತು ಶಿಫ್ಟ್ 2 ಮಧ್ಯಾಹ್ನ 3 ರಿಂದ ಸಂಜೆ 6 ರವರೆಗೆ ನಡೆಯಲಿದೆ. ನಗರ ಅಧಿಸೂಚನೆ ಚೀಟಿಗಳನ್ನು ಪರೀಕ್ಷೆಗೆ 10 ದಿನಗಳ ಮೊದಲು ಬಿಡುಗಡೆ ಮಾಡಲಾಗುತ್ತದೆ.


ಅದರ ನಂತರ, ಪ್ರವೇಶ ಪತ್ರಗಳನ್ನು ಪರೀಕ್ಷೆಗೆ ನಿಖರವಾಗಿ 4 ದಿನಗಳ ಮೊದಲು ಅಧಿಕೃತ ವೆಬ್ಸೈಟ್‌ನಲ್ಲಿ ಲಭ್ಯವಾಗುವಂತೆ ಮಾಡಲಾಗುತ್ತದೆ. ಅಭ್ಯರ್ಥಿಗಳು ತಮ್ಮ ವಿವರಗಳನ್ನು ವೆಬ್ಸೈಟ್‌ನಲ್ಲಿ ನೋಂದಾಯಿಸಿಕೊಳ್ಳಬೇಕು ಮತ್ತು ಪ್ರವೇಶ ಪತ್ರಗಳನ್ನು ಡೌನ್ಲೋಡ್ ಮಾಡಿಕೊಳ್ಳಬೇಕು ಎಂದು ಓಖಿಂ ಸೂಚಿಸಿದೆ. ಗಉಅ ಓಇಖ ಪರೀಕ್ಷೆಯಲ್ಲಿ ಅರ್ಹತೆ ಪಡೆದವರು ಜೂನಿಯರ್ ರಿಸರ್ಚ್ ಫೆಲೋಶಿಪ್ ಪ್ರಶಸ್ತಿ ಮತ್ತು ವಿಶ್ವವಿದ್ಯಾಲಯಗಳಲ್ಲಿ ಸಹಾಯಕ ಪ್ರಾಧ್ಯಾಪಕ ಹುದ್ದೆಗಳಿಗೆ ಸ್ಪರ್ಧಿಸಲು ಅವಕಾಶವಿರುತ್ತದೆ. ಇದು Phd ಪ್ರವೇಶಕ್ಕೂ ಉಪಯುಕ್ತವಾಗಿರುತ್ತದೆ.

# ಡಿ 23ರಂದು ಅಯ್ಯಪ್ಪಸ್ವಾಮಿ ಮಂಡಲ ಪೂಜೆ ಹಾಗೂ 9ನೇ ವರ್ಷದ ವಾರ್ಷಿಕೋತ್ಸವ ಮನೋಹರ್ ರೆಡ್ಡಿ

❑ ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಡಿ 20 . ಪಟ್ಟಣದ ಅಯ್ಯಪ್ಪ ಸ್ವಾಮಿ ದೇವಸ್ಥಾನ ದಲ್ಲಿ ಡಿ.23 ರ ಮಂಗಳವಾರ ದಂದು ಮಂಡಲ ಪೂಜೆ ಹಾಗೂ 9ನೇ ವರ್ಷದ ವಾರ್ಷಿಕೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಗುವುದೆಂದು ಅಯ್ಯಪ್ಪಸ್ವಾಮಿ ದೇವಸ್ಥಾನದ ಆಡಳಿತ ಮಂಡಳಿಯ ಅಧ್ಯಕ್ಷರಾದ ಮನೋಹರ್ ರೆಡ್ಡಿ ಮುನ್ನೂರು ತಿಳಿಸಿದರು.**

ಈ ಕಾರ್ಯಕ್ರಮದ ಅಂಗವಾಗಿ ಬೆಳಿಗ್ಗೆ 11.00ರಿಂದ 12.30ರವರೆಗೆ ಮಹಾ ಗಣಪತಿ



ಹೋಮ ಹಾಗೂ ದೇವಸ್ಥಾನದ ಅಯ್ಯಪ್ಪಸ್ವಾಮಿ ಮತ್ತು ಉಪದೇವತೆಗಳಿಗೆ ಕಳಸಾಭಿಷೇಕಂ ನಡೆಯಲಿದೆ. ಈ ಧಾರ್ಮಿಕ ವಿಧಿವಿಧಾನಗಳನ್ನು ಕೇರಳದ ಖ್ಯಾತ ಪಂಡಿತರಾದ ಶ್ರೀ ಶ್ರೀ ತಂತ್ರಿ ರತ್ನ, ವೇದ ವಿಭೂಷಣ ಪ್ರಶಾಂತ ನಂಬೋದರಿ ಅವರು ನೆರವೇರಿಸಲಿದ್ದಾರೆ. ಅವರು 1996ರಲ್ಲಿ ಶಬರಿಮಲೈ ಮೇಲ್ ಶಾಂದಿಯಾಗಿ ಸೇವೆ ಸಲ್ಲಿಸಿದವರಾಗಿದ್ದಾರೆ ಮಧ್ಯಾಹ್ನ 1.00 ಗಂಟೆಗೆ ಈಶ್ವರ ದೇವಸ್ಥಾನದಿಂದ ಅಯ್ಯಪ್ಪಸ್ವಾಮಿ ದೇವಸ್ಥಾನವರೆಗೆ ಭವ್ಯ ಮೆರವಣಿಗೆ ನಡೆಯಲಿದ್ದು, ನಂತರ ಅನ್ನಸಂತರ್ಪಣೆ ಹಮ್ಮಿಕೊಳ್ಳಲಾಗಿದೆ.


ಸಂಜೆ 6.00 ಗಂಟೆಗೆ ದೀಪೋತ್ಸವದ ನಂತರ ಭಗವತಿ ಸೇವೆ ನಡೆಯಲಿದೆ. ಸಂಜೆ 7.00 ಗಂಟೆಯಿಂದ ಅಯ್ಯಪ್ಪಸ್ವಾಮಿ ಪಡಿಪೂಜೆ, ಹತ್ತಾಯ ಪೂಜೆ, ಪುಷ್ಪಾಭಿಷೇಕ ಹಾಗೂ ಪಾನಕ ನೈವೇದ್ಯ ಕಾರ್ಯಕ್ರಮಗಳು ಜರುಗಲಿವೆ. ರಾತ್ರಿ 9.00 ಗಂಟೆಗೆ ಹರಿವರಾಸನಂ ನಡೆಯಲಿದೆ. ಸರ್ವ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಅಯ್ಯಪ್ಪಸ್ವಾಮಿ ಕೃಪೆಗೆ ಪಾತ್ರರಾಗಬೇಕೆಂದು ಮನವಿ ಮಾಡಿದರು. ಇರುಮುಡಿ ಕಾರ್ಯಕ್ರಮವು ಜನವರಿ 8, 2026 ಗುರುವಾರ ನಡೆಯಲಿದೆ ಎಂದರು. ಈ ಸಂದರ್ಭದಲ್ಲಿ ಈರಣ್ಣ ಶೆಟ್ಟಿ, ಸಿದ್ದರಾಮಪ್ಪ ಹಾಗೂ ರಾಜೇಶ್ ಮಾಣಿಕ್ ಉಪಸ್ಥಿತರಿದ್ದರು.

# ಸೊರಬ ವಿಧಾನಸಭಾ ಕ್ಷೇತ್ರದ ಜನತೆಯೊಂದಿಗೆ, ಸೊರಬ ಕ್ಷೇತ್ರದಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳ ಕುರಿತು ಸಂವಾದ ನಡೆಸಿದ ಸಚಿವ ಎನ್ ಎಸ್ ಬೋಸರಾಜ್

❑ ನೈಜ್ಯ ದೆಸೆ ನ್ಯೂಸ್

**ಬೆಳಗಾವಿ: ಬೆಳಗಾವಿಯ ವಿಧಾನಮಂಡಲ ಅಧಿವೇಶನವನ್ನು ವೀಕ್ಷಿಸಲು ಆಗಮಿಸಿದ್ದ ಸೊರಬ ವಿಧಾನಸಭಾ ಕ್ಷೇತ್ರದ ಜನತೆಯೊಂದಿಗೆ,**

ನನ್ನ ಸಂಪುಟ ಸಹೋದ್ಯೋಗಿ ಸನ್ಮಿತ್ರರ ಜೊತೆಗೂಡಿ ಸುವರ್ಣಸೌಧದಲ್ಲಿ ನಮ್ಮ ಇಲಾಖೆಗಳು ಸೊರಬ ಕ್ಷೇತ್ರದಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳ ಕುರಿತು ಅರ್ಥಪೂರ್ಣ ಸಂವಾದ ನಡೆಸಿದ ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಪರಿಷತ್ತಿನ ಸಭಾ



ನಾಯಕರು ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಎನ್ ಎಸ್ ಬೋಸುರಾಜು ಕ್ಷೇತ್ರದಲ್ಲಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ ಜಾರಿಗೊಳಿಸಿರುವ ಯೋಜನೆಗಳು,

ಅದರ ಪ್ರಯೋಜನಗಳ ಬಗ್ಗೆ ತಿಳಿಸಿ, ನೀರಾವರಿ ಕ್ಷೇತ್ರದಲ್ಲಿ ಆಗುತ್ತಿರುವ ಸಮಸ್ಯೆಗಳ ಬಗ್ಗೆ ಜನರಿಂದ ಅಹವಾಲುಗಳನ್ನು ಸ್ವೀಕರಿಸಿ, ಶೀಘ್ರವಾಗಿ ಸಮಸ್ಯೆಗಳನ್ನು ಬಗೆಹರಿಸುವ ಭರವಸೆ ನೀಡಲಾಯಿತು. ಈ ಸಂದರ್ಭದಲ್ಲಿ ಬ್ಯಾಡಗಿವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರಾದ ಶ್ರೀ ಬಸವರಾಜ ಶಿವಣ್ಣ , ಶಿರಸಿ?ಸಿದ್ದಾಪುರ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರಾದ ಶ್ರೀ ಭೀಮಣ್ಣ ನಾಯ್ಕ, ಮಾನ್ಯ ವಿಧಾನಪರಿಷತ್ ಸದಸ್ಯರಾದ ಶ್ರೀಮತಿ ಬಲ್ಕೀಶ್ ಬಾನು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ನಾಡಕಛೇರಿಯಲ್ಲಿ 'ಡಾಟಾ ಎಂಟ್ರಿ ಆಪರೇಟರ್' ತಾತ್ಕಾಲಿಕ ಹುದ್ದೆಗಳಿಗಾಗಿ ಅರ್ಜಿ ಆಹ್ವಾನ

❑ ನೈಜ್ಯ ದೆಸೆ ನ್ಯೂಸ್

ಧಾರವಾಡ: ಜಿಲ್ಲೆಯ ಅಟಲ್‌ಜೀ ಜನಸ್ನೇಹಿ ಕೇಂದ್ರ ಯೋಜನೆಯಡಿ ಕಾರ್ಯ ನಿರ್ವಹಿಸುತ್ತಿರುವ ನಾಡಕಛೇರಿಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಡಾಟಾ ಎಂಟ್ರಿ ಆಪರೇಟರರನ್ನು ಒಂದು ವರ್ಷದ ಅವಧಿಗೆ ಪೂರೈಸುವ ಕುರಿತು ಆಸಕ್ತ ಮತ್ತು ನೋಂದಾಯಿತ ಮಾನವ ಸಂಪನ್ಮೂಲ ಏಜೆನ್ಸಿಗಳಿಂದ ಇ- ಪ್ರೊಕ್ಯೂರ್ ಮೆಂಟ್ ಪೋರ್ಟಲ್ ಮೂಲಕ ಟಂಡರ್ ಕರೆಯಲಾಗಿದೆ.




ಹೆಚ್ಚಿನ ಮಾಹಿತಿಗಾಗಿ https://kppp.karnataka.gov.inನಲ್ಲಿ ಹಾಗೂ ಧಾರವಾಡ ಜಿಲ್ಲಾಧಿಕಾರಿಗಳ ಕಛೇರಿ ಅಟಲ್‌ಜೀ ಜನಸ್ನೇಹಿ ಕೇಂದ್ರದ ಶಾಖೆಗೆ ಸಂಪರ್ಕಿಸಬಹುದು ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# ಜನರ ಅನುಭವಗಳೆ ಜನಪದ ಸಾಹಿತ್ಯ-ಡಿವೈ-ಎಸ್ಪಿ ಚಂದ್ರಶೇಖರ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ನಗರದ ಜ್ಞಾನ ಜ್ಯೋತಿ ವಿಜ್ಞಾನ ಪದವಿ ಪೂರ್ವ ಕಾಲೇಜಿನಲ್ಲಿ ಶಾಲಾ ಕಾಲೇಜಿಗೊಂದು ಜಾನಪದ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಜನರ ಅನುಭವವೇ ಜಾನಪದ ಸಾಹಿತ್ಯ ಎಂದರು. ಒಬ್ಬರ ಬಾಯಿಂದ ಮತ್ತೊಬ್ಬರ ಬಾಯಿಗೆ ಮೌಖಿ-ಕವಾಗಿ ಹರಿದುಬಂದ ಜನಸಾಹಿತ್ಯವೆ ಜನಪದ. ಇದೊಂದು ಗಟ್ಟಿ ಸಾಹಿತ್ಯ ಎಂದು ಅಭಿಪ್ರಾಯ ಪಟ್ಟರು.**

ಜನಪದ ಗೀತೆಗಳಲ್ಲಿ ಲೋಕನೀತಿ ವಿಷಯ ಕುರಿತು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಸಿಂಧನೂರು ಸ್ನಾತಕೋತ್ತರ ಕೇಂದ್ರದ ಕನ್ನಡ ಅಧ್ಯಾಪಕರಾದ ಡಾ. ಗುರುರಾಜ ಅವರು ನೆಲಮೂಲ ಸಂಸ್ಕೃತಿಯೇ ಜನಪದ ಸಾಹಿತ್ಯದ ಮೂಲಗುಣ ಮತ್ತು ವ?ಶಿಷ್ಟ್ಯ ಎಂದರು.ಇದು ಪ್ರಕೃತಿ




ಮಡಿಲಿನ ಸಾಹಿತ್ಯ. ಯಾಂತ್ರಿಕ ಬದುಕಿನಲ್ಲಿ ಇದರ ಅಧ್ಯಯನ ಅಗತ್ಯವಾಗಿದೆ. ಜೀವನ ಮೌಲ್ಯಗಳನ್ನು ಕಲಿಸುವ ಗುಣ ಹೊಂದಿದೆ.ಆಧುನಿಕತೆಯ ಹೆಸರಿನಲ್ಲಿ ಆಹಾರವೂ ಕಲುಷಿತವಾಗುತ್ತಿದೆ. ಜನರ ಬದುಕೇ ಒಂದು ವಿಶ್ವವಿದ್ಯಾನಿಲಯ. ಜನಪದ ಗೀತೆಗಳು ಬದುಕುವುದನ್ನು ಕಲಿಸುತ್ತದೆ. ಸಾಕಷ್ಟು ಜನಪರ ನಿಲುವುಗಳಿವೆ. ಆಧುನಿಕತೆಯ ಪ್ರಭಾವಕ್ಕೆ ಒಳಗಾಗಿ ಅವಲಂಬಿತ ಕೃಷಿ ಬದುಕು ಕುಸಿತವಾಗುತ್ತಿದೆ. ಎಳ್ಳು ಜೀರಿಗೆ ಬೆಳೆಯೋಳೆ ಭೂತಾಯಿ ಎಂದು ಹೇಳುತ್ತ ವರ್ತಮಾನದ ಬದುಕನ್ನು ವಿಶ್ಲೇಷಿಸಿದರು.

ತಾತ್ವಿಕತೆಯನ್ನು ಕಟ್ಟಿಕೊಟ್ಟವರು. ಜನಪದರು ಪ್ರಕೃತಿಯ ಮಕ್ಕಳು. ಹತ್ತಿಕಟಿಗಿ ಬಿತ್ತಿಕಟಿಗಿ ಬಾವನೂರು. ಹಾಡನ್ನು ಮೆಲುಕು ಹಾಕಿದರು. ಜೀವನಮೌಲ್ಯವೇ ಹಾಡಾಗಿ ರೂಪುಗೊಂಡಿವೆ. ಒಳ್ಳೆಯವರ ಗೆಳೆತನ ಕಲ್ಲು ಸಕ್ಕರೆಯಂತೆ ಎಂದರು. ಆನೆ ಬಂತೊಂದು ಆನೆ, ಇಲ್ಲಿಗ್ಯಾಕ ಬಂತು ಎಂದು ಹೇಳುವ ಮೂಲಕ ಇತಿಹಾಸ ವಿವರಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಜ್ಞಾನ ಜ್ಯೋತಿ ಕಾಲೇಜಿನ ಪ್ರಾಂಶುಪಾಲರಾದ ಎನ್. ಪಿ. ವಿಷ್ಣುವರ್ಧನ ರೆಡ್ಡಿ ಅವರು ಒಗಟು ಹೇಳಿಕೊಳ್ಳುವ, ಹಾಡುವ ಮೂಲಕವೇ ನಮ್ಮ ತಲೆಮಾರು ಬೆಳೆದಿದೆ. ಆದರೆ ಇಂದಿನ ವಿದ್ಯಾರ್ಥಿಗಳು ಮೊಬ-ಲುಗಳ ಗೀಳಾಗಿರುವುದನ್ನು ವಿಷಾದಿಸಿದರು.

ಸಮಾಜಕ್ಕೆ ಮಾರ್ಗದರ್ಶನ ನೀಡುವುದೆ ಜನಪದ ಸಾಹಿತ್ಯ ಎಂದರು. ಕರ್ನಾಟಕ ಜಾನಪದ ಪರಿಷತ್ತಿನ ಅಧ್ಯಕ್ಷರಾದ ಡಾ. ಬಸವರಾಜ. ಪಿ. ನಾಯಕ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.ಈ ಸಂದರ್ಭದಲ್ಲಿ ಜನಪದ ಗಾಯನ ಸ್ಪರ್ಧೆಯಲ್ಲಿ ವಿಜೇತರಾದ ದುರ್ಗಮ್ಮ ಪ್ರಥಮ, ಅಪೂರ್ವ ದ್ವಿತೀಯ, ತೃತೀಯ ಸ್ಥಾನ ಫಕೀರಮ್ಮ, ಮತ್ತು ವರ್ಷಿಣಿ ಅವರಿಗೆ ಬಹುಮಾನ ಮತ್ತು ಪ್ರಮಾಣ ಪತ್ರ ವಿತರಿಸಲಾಯಿತು.ಜ್ಞಾನ ಜ್ಯೋತಿ ಪದವಿ ಪೂರ್ವಕಾಲೇಜಿನ ಉಪನ್ಯಾಸಕರಾದ ಬಸವರಾಜ, ಜ್ಞಾನೇಶ್ವರ, ಲಿಂಗಸಗೂರು ಸರಕಾರಿ ಕಾಲೇಜಿನ ಸಹ ಪ್ರಾಧ್ಯಾಪಕರಾದ ಡಾ. ಸಂಗನಗೌಡ, ಹಾಗೂ ಸರಕಾರಿ ಪದವಿ ಕಾಲೇಜಿನ ಉಪನ್ಯಾಸಕರಾದ ಡಾ. ಮರಿಲಿಂಗಪ್ಪ ಉಪಸ್ಥಿತರಿದ್ದರು.ಜ್ಞಾನ ಜ್ಯೋತಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾದ ನೂರ್ ಮಹ್ಮದ್, ಗಿರೀಶ, ವೆಂಕಟೇಶ್ ಮತ್ತು ಅನೇಕ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಜನಪದ ಗಾಯನ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ದುರ್ಗಮ್ಮ ಪ್ರಾರ್ಥಿಸಿದರು. ಡಾ. ಧರ್ಮಣ್ಣ ಗೋನಾಳ ನಿರೂಪಿಸಿದರು. ಮಲ್ಲಯ್ಯ ಹಿರೇಮಠ ಸ್ವಾಗತಿಸಿದರು. ಶೋಭಾ ತೋರಗಲ್ ವಂದಿಸಿದರು.

## ನೇಮಕಾತಿ ಪ್ರಕಟಣೆ

ಭಾರತ ಸರ್ಕಾರದ ವಿವಿಧ ಹುದ್ದೆಗಳಲ್ಲಿನ ಯುಪಿಎಸ್ಸಿ ನೇರ ನೇಮಕಾತಿ ಪ್ರಕಟಿಸಿದ ದಿನಾಂಕ: 05 ಡಿಸೆಂಬರ್ 2025, ಬೆಳಿಗ್ಗೆ 11:35 ಪತ್ರ ಮಾಹಿತಿ ಕಚೇರಿ, ದೆಹಲಿ ಯುಪಿಎಸ್ಸಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕೈಗಾರಿಕೆ ಮತ್ತು ಆಂತರಿಕ ವ್ಯಾಪಾರ ಪ್ರೋತ್ಸಾಹ ಇಲಾಖೆ, ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ಅಧೀನದಲ್ಲಿರುವ ಪೇಟೆಂಟ್‌ಗಳು, ವಿನ್ಯಾಸಗಳು ಮತ್ತು ವ್ಯಾಪಾರ ಚಿಹ್ನೆಗಳ ನಿಯಂತ್ರಕ ಜನರಲ್ ಕಚೇರಿಯಲ್ಲಿ ವ್ಯಾಪಾರ ಚಿಹ್ನೆಗಳು ಮತ್ತು ಭೌಗೋಳಿಕ ಸೂಚನೆಗಳ ಪರೀಕ್ಷಕರ ಹುದ್ದೆಗೆ 100 ಖಾಲಿ ಹುದ್ದೆಗಳು, ಮತ್ತು ಯೂನಿಯನ್ ಪಬ್ಲಿಕ್ ಸರ್ವೀಸ್ ಕಮಿಷನ್‌ನಲ್ಲಿ ಪರೀಕ್ಷಾ ಸುಧಾರಣೆಗಳ ಉಪನಿರ್ದೇಶಕರ ಹುದ್ದೆಗೆ 2 ಖಾಲಿ ಹುದ್ದೆಗಳು ಇರುವುದರಿಂದ, ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.ಸೂಚನೆ ಸಂಖ್ಯೆ 14/2025 ಹಾಗೂ ಅಭ್ಯರ್ಥಿಗಳಿಗಾಗಿ ನೀಡಿರುವ ವಿವರವಾದ ಸೂಚನೆಗಳನ್ನು ಶೀಘ್ರದಲ್ಲೇ ಆಯೋಗದ ವೆಬ್‌ಸೈಟ್ https://upsc.gov.in ನಲ್ಲಿ ಪ್ರಕಟಿಸಲಾಗುತ್ತದೆ. ಆಸಕ್ತ ಅಭ್ಯರ್ಥಿಗಳು 2025 ಡಿಸೆಂಬರ್ 13 ರಿಂದ 2026 ಜನವರಿ 01 ರವರೆಗೆ https://upsconline.nic.in ನಲ್ಲಿ ಲಭ್ಯವಿರುವ ಆನ್‌ಲೈನ್ ರಿಕ್ರೂಟ್‌ಮೆಂಟ್ ಅಪ್ಲಿಕೇಶನ್ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಬಹುದು. ದಯವಿಟ್ಟು ನೀಡಿರುವ ವಿವರವಾದ ಸೂಚನೆಗಳನ್ನು ಅನುಸರಿಸುವಂತೆ ಅಭ್ಯರ್ಥಿಗಳಿಗೆ ವಿನಂತಿಸಲಾಗಿದೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 13–12–2025 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 01–ಜನವರಿ–2026

## ಕಾರ್ಯಾಗಾರದಲ್ಲಿ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ವೆಂಕಟೇಶ ಸಲಹೆ ಬಾಲ್ಯ ವಿವಾಹ ಪದ್ಧತಿ ನಿರ್ಮೂಲನೆ ಕಾರ್ಯಕ್ಕೆ ಸರ್ವರೂ ಕೈಜೋಡಿಸಬೇಕು

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಡಿಸೆಂಬರ್ 19 (ಕರ್ನಾಟಕ ವಾರ್ತೆ): ಸಾಮಾಜಿಕ ಪಿಡುಗಾಗಿ ಪರಿಣಮಿಸಿದ ಬಾಲ್ಯ ವಿವಾಹದಿಂದಾಗಿ ಮಕ್ಕಳ ಭವಿಷ್ಯ ಹಾಳಾಗುತ್ತಿದೆ. ಆದ್ದರಿಂದ ಸರ್ಕಾರದ ಜೊತೆ ಎಲ್ಲರೂ ಸೇರಿ ಜಾಗೃತಿ ಮೂಡಿಸಿದಾಗ ಬಾಲ್ಯ ವಿವಾಹ ಪದ್ಧತಿಯನ್ನು ನಿರ್ಮೂಲನೆ ಮಾಡಲು ಸಾಧ್ಯವಾಗುತ್ತದೆ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ವೆಂಕಟೇಶ್ ಅವರು ತಿಳಿಸಿದರು.**

ಡಿಸೆಂಬರ್ 19ರ ಶುಕ್ರವಾರ ದಂದು ನಗರದ ಮಾಣಿಕ್ ಪ್ರಭು ಅಂಧ ಮಕ್ಕಳ ಶಾಲೆಯಲ್ಲಿ ಎಂ.ಆರ್.ಡಬ್ಲ್ಯೂ ಮತ್ತು ವಿ.ಆರ್.ಡಬ್ಲ್ಯೂಗಳಿಗೆ ಮಕ್ಕಳ ರಕ್ಷಣಾ ಕಾನೂನುಗಳ ಕುರಿತು ಹಮ್ಮಿಕೊಂಡಿದ್ದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಬಾಲ್ಯ ವಿವಾಹದಿಂದ ಮಕ್ಕಳ ಶಿಕ್ಷಣ



ಮೊಟಕಾಗುತ್ತದಲ್ಲದೆ ಅವರ ಭವಿಷ್ಯ ನಾಶವಾಗಲಿದೆ. ಮಕ್ಕಳ ಮೇಲೆ ಅನೇಕ ರೀತಿಯಲ್ಲಿ ದುಷ್ಪರಿಣಾಮ ಉಂಟು ಮಾಡುವ ಈ ಕೆಟ್ಟ ಪದ್ಧತಿ ಬಗ್ಗೆ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದರು. ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ, ಮಕ್ಕಳಿಗೆ ಸುರಕ್ಷಿತ ವಾತಾವರಣ ಕಲ್ಪಿಸುವುದು ಇಂದಿನ ಅಗತ್ಯವಾಗಿದೆ.

ಎಲ್ಲಾ ಇಲಾಖೆಗಳ ಎಲ್ಲಾ ಹಂತದ ಅಧಿಕಾರಿಗಳು ಹಾಗೂ ಸಾರ್ವಜನಿಕರು ಈ ಬಗ್ಗೆ ಅರಿಯಬೇಕು. ಮಕ್ಕಳು, ಮೊಬೈಲ್ ಮತ್ತು ಸಾಮಾಜಿಕ ಜಾಲತಾಣಗಳ ಗೀಳಿಗೆ ಬಿದ್ದು, ಆನ್ಲೈನ್ ವಂಚಕರ ಜಾಲಕ್ಕೆ ಬಲಿ ಆಗುತ್ತಿರುವದು ಕೂಡ ಹೆಚ್ಚಾಗುತ್ತಿದ್ದು, ಈ ಬಗ್ಗೆಯೂ ಕೂಡ ಜಾಗೃತಿ ಮೂಡಿಸಿ ಮಕ್ಕಳನ್ನು ರಕ್ಷಿಸುವ ಕೆಲಸ ಮಾಡಬೇಕು ಎಂದರು. ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಅಮರೇಶ್ ಹಾವಿನ ಅವರು ಪ್ರಾಸ್ತಾವಿಕ ಮಾತನಾಡಿದರು.

ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಸುದರ್ಶನ್ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೊಸಗಿ ಅವರು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು. ಸಂಪನ್ಮೂಲವ್ಯಕ್ತಿರಾಜೇಂದ್ರಅವರು ಮಕ್ಕಳ ರಕ್ಷಣಾ ಕಾನೂನುಗಳ ಕುರಿತು ಉಪನ್ಯಾಸ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ವಿಕಲಚೇತನರ ಕಲ್ಯಾಣ ಇಲಾಖೆಯ ಅಧಿಕಾರಿ ಶ್ರೀದೇವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶರಣಮ್ಮ ಕಾರನೂರು, ಮಾಣಿಕ ಪ್ರಭು ಅಂಧಮಕ್ಕಳ ಶಾಲೆಯ ಮುಖ್ಯ ಗುರುಗಳಾದ ಆರ್.ಎಂ ಯತ್ನಳ್ಳಿ, ರಕ್ಷಣಾಧಿಕಾರಿ ಹನುಮೇಶ, ಮಕ್ಕಳ ಸಹಾಯವಾಣಿ ಸಂಯೋಜಕ ಮೋಹನ್ ಕುಮಾರ್, ರಮೇಶ್ ಅವರು ಇದ್ದರು. ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ ತಿಕ್ಕಯ್ಯ ಅವರು ನಿರೂಪಿಸಿದರು. ರಕ್ಷಣಾಧಿಕಾರಿ ಅಸಾಂಸ್ಥಿಕ ಕಿರಿಲಿಂಗಪ್ಪ ಅವರು ಸ್ವಾಗತಿಸಿದರು. ಕಾನೂನು ಪರಿವೀಕ್ಷಣಾಧಿಕಾರಿ ಶಿವರಾಜ್ ಪಾಟೀಲ್ ಅವರು ವಂದಿಸಿದರು. ಹಾಗೂ ಇತರ ಸಿಬ್ಬಂದಿ ಹಾಜರಿದ್ದರು.

## ತುರ್ವಿಹಾಳ ಪಟ್ಟಣ ಪಂಚಾಯತಿಗೆ ಉಪ ಚುನಾವಣೆ; ಮದ್ಯ ಮಾರಾಟ ನಿಷೇಧಿಸಿ ಆದೇಶ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಡಿಸೆಂಬರ್ 19 (ಕರ್ನಾಟಕ ವಾರ್ತೆ): ಸಿಂಧನೂರು ತಾಲೂಕಿನ ತುರ್ವಿಹಾಳ ಪಟ್ಟಣ ಪಂಚಾಯಿತಿಯಲ್ಲಿ ತೆರವಾಗಿರುವ ಸದಸ್ಯ ಸ್ಥಾನಕ್ಕೆ ಉಪ ಚುನಾವಣೆಯ ಮತದಾನವು ಡಿಸೆಂಬರ್ 21ರಂದು ನಡೆಯಲ್ಲಿದ್ದು, ಮತದಾನವು ಸೂಸುತ್ರವಾಗಿ,**



ಶಾಂತಿ ರೀತಿಯಿಂದ ನಡೆಸುವ ಉದ್ದೇಶದಿಂದ ಹಾಗೂ ಕಾನೂನು ಮತ್ತು ಸುವ್ಯವಸ್ಥೆಯನ್ನು ಪಾಲಿಸುವ ಹಿತದೃಷ್ಟಿಯಿಂದ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ರೀತಿಯ ಮದ್ಯ ತಯಾರಿಕಾ ಘಟಕಗಳು, ಸಾಗಾಣಿಕೆ, ಸಂಗ್ರಹಣೆಯನ್ನು ಹಾಗೂ ಮಾರಾಟ ಮಳಿಗೆಗಳನ್ನು ಡಿ.19ರ ಸಂಜೆ 05 ಗಂಟೆಯಿಂದ ಡಿ.21ರ ಮಧ್ಯರಾತ್ರಿ 12 ಗಂಟೆವರೆಗೆ ಬಂದ್ ಇಡುವಂತೆ ಜಿಲ್ಲಾ ದಂಡಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಆದೇಶ ಹೊರಡಿಸಿದ್ದಾರೆ.

## ರೈಸಿಂಗ್ ಸನ್ ಪಬ್ಲಿಕ್ ಸ್ಕೂಲ್ ವತಿಯಿಂದ ವಸ್ತು ಪ್ರದರ್ಶನ



❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ರೈಸಿಂಗ್ ಸನ್ ಪಬ್ಲಿಕ್ ಸ್ಕೂಲ್ ಹಾಗೂ ರೈಸಿಂಗ್ ಸನ್ ಕಿಂಡರ್ ಗಾರ್ಟನ್ ಆವರಣದಲ್ಲಿ ಶಾಲೆಯ ವಿದ್ಯಾರ್ಥಿಗಳಿಂದ ನಡೆದ ವಸ್ತು ಪ್ರದರ್ಶನ ಕಾರ್ಯಕ್ರಮವನ್ನು ಪುರಸಭೆ ಹಿರಿಯ ಸದಸ್ಯರಾದ ಲಕ್ಷಿ ?ಮೇದೇವಿ ನಾಯಕ ರವರು ಉದ್ಘಾಟಿಸಿ ಮಾತನಾಡಿ ಮಕ್ಕಳಲ್ಲಿನ ಪ್ರತಿಭೆ ಹಾಗೂ ಕೌಶಲ್ಯವನ್ನು ಗುರುತಿಸಿದಾಗ ಮಾತ್ರ ವಿದ್ಯಾರ್ಥಿಗಳು ಹೆಚ್ಚಿನ ಸಾಧನೆಯನ್ನು ತೋರುವುದಕ್ಕೆ ಸಾಧ್ಯವಾಗುತ್ತದೆ ವಸ್ತು ಪ್ರದರ್ಶನ ಕಾರ್ಯಕ್ರಮಗಳಿಂದ ಶಾಲೆಯ ಮಕ್ಕಳ ಹಾಗೂ ಶಿಕ್ಷಕರ ನಡುವೆ ಉತ್ತಮ ಭಾಂದವ್ಯ ಬೆಳೆಯುತ್ತದೆ.**

ಮತ್ತು ಪಾಲಕರಿಗೆ ಕೂಡ ತಮ್ಮ ಮಕ್ಕಳಲ್ಲಿನ ಕೌಶಲ್ಯವನ್ನು ತಿಳಿಯುವುದಕ್ಕೆ ಉತ್ತಮವಾದ ವೇದಿಕೆಯಾಗುತ್ತದೆ ಎಂದು ತಿಳಿಸಿದರು. ಶಾಲೆಯ ವಿದ್ಯಾರ್ಥಿಗಳು ವಿಜ್ಞಾನ,ಕೃಷಿ, ಆರೋಗ್ಯ, ಮಾನವ ಅಂಗಗಳು, ಜನಜೀವನ, ಪರಿಸರ,ಗ್ರಾಮೀಣ ಭಾಗದ ಹಳ್ಳಿ ಸೊಗಡಿನ ವಾತಾವರಣವನ್ನು ನೆನಪಿಸುವ ವಿವಿಧ ಮಾದರಿಗಳನ್ನು ಪ್ರದರ್ಶಿಸಿ ಪಾಲಕರಿಗೆ ಅಗತ್ಯ ಮಾಹಿತಿಯನ್ನು ನೀಡುವ ಮೂಲಕ ಗಮನವನ್ನು ಸೆಳೆದರು. ಶಾಲೆಯ ವ್ಯವಸ್ಥಪಕರಾದ ಹೆನ್ನ ಆಜಮೀರ್, ಪುರಸಭೆ ಸದಸ್ಯರಾದ ಶೇಖ ಫರೀದ್ ಉಮ್ರಿ, ಮುಖಂಡರಾದ ಎಂ.ಎ.ಮುಖೀಮ್, ಶಾಲೆಯ ಶಿಕ್ಷಕರಾದ ಸುಮಲಾತಾ,ಅಕ್ಷರ, ಅಲೋಟೋ,ಶಬಾನಾ,ಝ್ಬಿಮಿಂಗ್,ಸ್ಟುತೋಯ್ಸ್,ಸುಕಾನ್ಯ,ಸನಾ,ಆಯೋಶ, ಪಾಲಕರಾದ ಶಬೀನಾ, ನವಿಕಾ, ಶಕೀರ ಸೇರಿದಂತೆ ಇನ್ನಿತರರು ಇದ್ದರು.

## ಡಿ.20ರಂದು ನಗರದಲ್ಲಿ ನಿರಂತರ ವಿದ್ಯುತ್ ಪೂರೈಕೆ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಡಿಸೆಂಬರ್ 19 (ಕರ್ನಾಟಕ ವಾರ್ತೆ): ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ನಿಮಿತ್ತ ಇಲ್ಲಿನ ಜೆಸ್ಕಾಂ ನೋಡಲ್ ಆಫೀಸರ್ 220ಕೆವಿ ಸ್ವೀಕರಣ ಕೇಂದ್ರದ ಕೆಪಿಟಿಸಿಎಲ್‌ನಿಂದ ಡಿಸೆಂಬರ್ 20ರಂದು ನಿಗದಿಯಾಗಿದ್ದ ವಿದ್ಯುತ್ ವ್ಯತ್ಯಯ ನಿರ್ಧಾರವನ್ನು ಕೈಬಿಟ್ಟು ನಗರದಲ್ಲಿ ನಿರಂತರವಾಗಿ ವಿದ್ಯುತ್ ಪೂರೈಕೆ ಮಾಡಲಾಗುವುದು ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

## ಬೈಲಮರ್ಚೆಡ್ ಗ್ರಾಮದಲ್ಲಿ ಅಗ್ನಿದುರಂತದಿಂದ ಅಪಾರ ಪ್ರಮಾಣದಲ್ಲಿ ಹಾನಿ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ತಾಲೂಕಿನ ಬೈಲಮರ್ಚೆಡ್ ಗ್ರಾಮದಲ್ಲಿ ಶುಕ್ರವಾರ ಬೆಳಿಗ್ಗೆ ಸುಮಾರು 11 ಗಂಟೆಗೆ ಗ್ರಾಮದ ರೈತರಾದ ಬಸವರಾಜ, ಚಂದ್ರ,ಅನುಸೂಯಮ್ಮ, ಆಂಜನೇಯ,ಈಶಪ್ಪ,ಮೌನೇಶ ರವರ ಮನೆ ಹತ್ತಿರ ತಮ್ಮ ಜಾನುವಾರುಗಳಿಗಾಗಿ ಬಯಲು ಪ್ರದೇಶದಲ್ಲಿ ಸಂಗ್ರಹಿಸಿದ ಭತ್ತದ ಮೇವಿನ ಎರಡು ಬಣವೆಗಳು ಹಾಗೂ ಜೋಳದ ಸಪ್ಪೆಯ ಬಣವೇ ಒಂದು ಹಾಗೂ ರೈತರು ತಮ್ಮ 20 ಎಕರೆಯಲ್ಲಿ ಬೆಳೆದು ಸಂಗ್ರಹಿಸಿದ ಹತ್ತಿಗೆ ಆಕಸ್ಮಿಕ ಬೆಂಕಿ ಅಪಘಾತದಿಂದಾಗಿ ಸಂಪೂರ್ಣವಾಗಿ ಸುಟ್ಟು ನಾಶವಾಗಿದ್ದು ಅಂದಾಜು ರೈತರಿಗೆ ನಾಲ್ಕು ಲಕ್ಷದವರೆಗೂ ನಷ್ಟವಾಗಿರಬಹುದಾಗಿ ಅಂದಾಜಿಸಲಾಗಿದೆ ಎಂದು ಮಾನ್ವಿ ಅಗ್ನಿಶಾಮಕ**



ಠಾಣಾಧಿಕಾರಿ ರಂಗಪ್ಪ ಮಾಹಿತಿ ನೀಡಿದರು. ಆಗ್ನಿಅನಾಹುತವಾಗಿರುವ ಕುರಿತು ಮಾಹಿತಿ ತಿಳಿಯುತ್ತಲೇ ಮಾನ್ವಿ ಅಗ್ನಿಶಾಮಕ ಇಲಾಖೆಯ ಸಹಾಯಕ ಠಾಣಾಧಿಕಾರಿಗಳಾದ



ಹಾಜಿಮೀಯ ಹಾಗೂ ಸಿಬ್ಬಂದಿಗಳು ಗ್ರಾಮಕ್ಕೇ ಆಗಮಿಸಿ ಬೆಂಕಿಯನ್ನು ನಂದಿಸುವ ಮೂಲಕ ಗ್ರಾಮದಲ್ಲಿ ಇನ್ನೂ ಹೆಚ್ಚಿನ ಇತರ ಜನವಸತಿ ಪ್ರದೇಶಗಳಿಗೆ ವ್ಯಾಪಿಸದಂತೆ ತಡೆಯುವ ಮೂಲಕ ಹೆಚ್ಚಿನ ಹಾನಿಯುಂಟಾಗುವುದನ್ನು ತಪ್ಪಿಸಿದರು. ಗ್ರಾಮಸ್ಥರು ಬಣವೆ ಹತ್ತಿರ ಕಟ್ಟಿ ಹಾಕಲಾದ ಎಮೆಗಳನ್ನು ರಕ್ಷಿಸುವುದಕ್ಕೆ ಸಹಕಾರ ನೀಡಿದರು.

## ಡಿಸೆಂಬರ್ 22ರಂದು ಉದ್ಯೋಗಕ್ಕಾಗಿ ಸಂದರ್ಶನ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು ಡಿಸೆಂಬರ್ 19 (ಕರ್ನಾಟಕ ವಾರ್ತೆ): ನಗರದ ಮಾಣಿಕ ನಗರದಲ್ಲಿ ಡಿಸೆಂಬರ್ 22ರ ಬೆಳಿಗ್ಗೆ 10 ಗಂಟೆಗೆ ಉದ್ಯೋಗಕ್ಕಾಗಿ ಸಂದರ್ಶನವು ಆಯೋಜಿಸಲಾಗಿದೆ. ಐ,ಟಿ,ಐ,ಕೋರ್ಸನ ಎಲೆಕ್ಟ್ರಿಶೀಯನ್, ಎಲೆಕ್ಟ್ರಾನಿಕ್, ಮೆಕ್ಯಾನಿಕ್, ಫೀಟರ್, ಟರ್ನರ್, ಎಮ್,ಎಮ್,ವಿ, ಎಮ್,ಆರ್,ಎಸಿ, ವೆಲ್ಡರ್, ಕೋಪಾ ವೃತ್ತಿಯ ತರಬೇತುದಾರರು ಮತ್ತು ಡಿಪ್ಲೋಮಾ ಹಾಗೂ ಪದವಿಯಲ್ಲಿ ಉತ್ತೀರ್ಣರಾದ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಇದರ ಸದುಪಯೋಗವನ್ನು ಪಡೆಯಬಹುದಾಗಿದೆ.**

ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಹಯೋಗದಲ್ಲಿ ಉದ್ಯೋಗದ ಸಂದರ್ಶನಕ್ಕಾಗಿ ರಾಯಚೂರಿನ ಸಾವಿತ್ರಿ ಗ್ರೂಪ್, ಹೋಂಡಾ ಮೋರ?ಸ ಬೆಂಗಳೂರಿನ ಟಾಟಾ ಎಲೆಕ್ಟ್ರಿಕಲ್, ಬಳ್ಳಾರಿಯ ಜೆ,ಎಸ್.ಡಬ್ಲ್ಯೂ, ಕೋಲಾರದ ಟಾಟಾ ಮೋರ?ಸ, ಹೋಂಡಾ ಮೋರ?ಸ, ಕಲಬುರಗಿಯ ಅರ್ಥ ಮೂವರ್ಸ, ಬೆಂಗಳೂರಿನ ವಿಸನ್ ಇಂಡಿಯಾ ಲಿಮಿಟೆಡ್, ಹೈದ್ರಾಬಾದ್ ಎಮ್.ಆರ್,ಎಫ್ ಟೈರ್ಸ ಸೇರಿದಂತೆ ಪ್ರತಿಷ್ಠಿತ ಕಂಪನಿಗಳ ಪ್ರತಿನಿಧಿಗಳು ಆಗಮಿಸುತ್ತಿದ್ದು, ಸ್ಥಳದಲ್ಲಿಯೇ ಸಂದರ್ಶನ ನಡೆಸಿ ಸೂಕ್ತ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 7760776556, 9590649335, 9035064582ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರಿನ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿ.20 ರಿಂದ ರಾಯಚೂರಿನ ಜಂಬಲದಿನ್ನಿ ರಂಗಮಂದಿರದಲ್ಲಿ 2 ದಿನ ದಲಿತ ಸಾಹಿತ್ಯ ಸಮ್ಮೇಳನ: ನಾಗೇಶ ಜಂಗಮರಹಳ್ಳಿ

❑ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಡಿ,19– ದಲಿತ ಸಾಹಿತ್ಯ ಪರಿಷತ್ತಿನ ರಾಜ್ಯ ಘಟಕದವತಿಯಿಂದ 1ನೇ ಅಖಿಲ ಭಾರತ ದಲಿತ ಸಾಹಿತ್ಯ ಸಮ್ಮೇಳನ ಡಿ.20 ಹಾಗೂ 21 ರಂದು ರಾಯಚೂರು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗ ಮಂದಿರದಲ್ಲಿ ಏರ್ಪಡಿಸಲಾಗಿದೆ ಎಂದು ಮಸ್ಕಿ ದಲಿತ ಸಾಹಿತ್ಯ ಪರಿಷತ್ತು ಅಧ್ಯಕ್ಷ ನಾಗೇಶ ಜಂಗಮರಹಳ್ಳಿ ಮಾತನಾಡಿದರು.**

ಪಟ್ಟಣದಲ್ಲಿ ಪತ್ರಿಕಾ ಹೇಳಿಕೆ ನೀಡಿ ಮಾತನಾಡಿದ ಅವರು,ಜಯದೇವಿ ಸಮ್ಮೇಳನದ



ಸರ್ವಾಧ್ಯಕ್ಷತೆ ವಹಿಸಲಿದ್ದಾರೆ.ಸಾಹಿತಿ ಪ್ರೊ.ಬರಗೂರು ರಾಮಚಂದ್ರಪ್ಪ ಉದ್ಘಾಟಿಸಲಿದ್ದಾರೆ. ಸಮ್ಮೇಳನದಲ್ಲಿ ಸರ್ವರಿಗೂ ಸಂವಿಧಾನಮತ್ತು ಮೀಸಲಾತಿ ಒಳಗೆ ಮತ್ತು ಹೊರಗೆ ಕುರಿತು ಸಂವಾದ ಸಾಹಿತ್ಯದ ಕುರಿತು ವಿಚಾರ ಗೋಷ್ಠಿಮಹಿಳಾಕಾವ್ಯಾಯಾನುಪುರುಷ ಕಾವ್ಯಾಯಾನ,ಸಾಂಸ್ಕೃತಿಕ ಗೋಷ್ಠಿಯನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮಗಳು,ರಾಷ್ಟ್ರೀಯ ಗೌರವ ಪ್ರಶಸ್ತಿ,ರಾಷ್ಟ್ರೀಯ ಯುವ ಪ್ರಶಸ್ತಿ,ರಾಷ್ಟ್ರೀಯ ಪುಸ್ತಕ ಪ್ರಶಸ್ತಿ,ಬಾಲ ಪ್ರಶಸ್ತಿ ಪ್ರಧಾನ ಕಾರ್ಯಕ್ರಮಗಳು ನಡೆಯಲಿವೆ ಎಂದರು. ಜಿಲ್ಲೆಯ ಶಾಸಕರು, ವಿಧಾನಪರಿಷತ್ ಸದಸ್ಯರು, ಸಂಸದರು, ಅಧಿಕಾರಿಗಳ ಮೆರವಣಿಗೆ ಚಾಲನೆ ನೀಡುವರು. ಮಂದಿರದ ವರೆಗೆ ಜಾನಪದ ಕಲಾ ತಂಡಗಳ ಮೆರವಣಿಗೆ ನಡೆಯಲಿದೆ. ಮೇಯರ್ ನರಸಮ್ಮ ಮಾಡಗಿರಿ ಸಮ್ಮೇಳನದಲ್ಲಿ ಒಟ್ಟು ಆರುಗೋಷ್ಠಿಗಳು ನಡೆಯಲಿವೆ. ಡಿ.21ರಂದು ಸಂಜೆ 4 ಗಂಟೆಗೆ ಸಮಾರೋಪ ಕಾರ್ಯಕ್ರಮ ನಡೆಯಲಿದೆ.ಜಾನಪದ ಅಕಾಡೆಮಿ ಅಧ್ಯಕ್ಷಗೊಲ್ಲಹಳ್ಳಿ ಶಿವಪ್ರಸಾದ ಸಮಾರೋಪ ಭಾಷಣ ಮಾಡುವರು ಹಾಗೂ ಬೀದರ್ ಸಾಹಿತಿಗಳು,ಭಾಗವಹಿಸಲಿದ್ದು ಬೌದ್ಧ ವಿಹಾರದ ವರಜ್ಯೋತಿ ಡಿ.20 ರಂದು ಬೆಳಗ್ಗೆ 8 ಗಂಟೆಗೆ ಭಂತೇಜಿ ನೇತೃತ್ವ ವಹಿಸುವರು ಬಸವೇಶ್ವರ ವೃತ್ತದಿಂದಜಿಲ್ಲಾರಂಗ ಎಂದು ತಿಳಿಸಿದರು.

## ನಿರ್ಮಲ ತುಂಗಭದ್ರಾ ಅಭಿಯಾನ ಪಾದಯಾತ್ರೆ ಪೂರ್ವಭಾವಿ ಸಭೆ ಸಿಂಧನೂರು

❑ ನೈಜ್ಯ ದೆಸೆ ನ್ಯೂಸ್

**ರಾಷ್ಟ್ರೀಯ ಸ್ವಾಭಿಮಾನ ಆಂದೋಲನ ನವದೆಹಲಿ, ನಿರ್ಮಲ ತುಂಗಭದ್ರಾ ಅಭಿಯಾನ ಸಮಿತಿ (ರಿ) ಕರ್ನಾಟಕ, ಪರ್ಯಾವರಣ ಟ್ರಸ್ಟ್ (ರಿ) , ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಪಾಟೀಲ್ ಮಹಿಳಾ ಪದವಿ ಕಾಲೇಜಿನಲ್ಲಿ ನಿರ್ಮಲ ತುಂಗಭದ್ರಾ ಅಭಿಯಾನ ಪಾದಯಾತ್ರೆ ಪೂರ್ವಭಾವಿ ಸಭೆ ನಡೆಸಲಾಯಿತು.**

ಸಭೆಯಲ್ಲಿ ಬಾಲಕೃಷ್ಣ ಅವರು ಮಾತನಾಡಿ ನಿರ್ಮಲ ತುಂಗಭದ್ರಾ ಅಭಿಯಾನ ಮೂರನೇ ಹಂತದ ಜಲ ಜಾಗೃತಿ ಜನ ಜಾಗೃತಿ, ತುಂಗಭದ್ರಾ ಉಳಿಸಿ ಜಾಗೃತಿ ಪಾದಯಾತ್ರೆ ಕಿಷ್ಕಿಂದೆಯಿಂದ ಮಂತ್ರಾಲಯದ ವರೆಗೆ ಪಾದಯಾತ್ರೆ ದಿನಾಂಕ 27.12.2025 ರಿಂದ 4. 1.2026 ರವರೆಗೆ ಹಮ್ಮಿಕೊಂಡಿದ್ದು ದಿನಾಂಕ 30.12.2025 ರಂದು





ಸಿಂಧನೂರಿನಲ್ಲಿ ಬೃಹತ್ ತುಂಗಭದ್ರಾ ಉಳಿಸಿ ಜಾಗೃತಿ ಪಾದಯಾತ್ರೆ ನಡೆಯಲಿದ್ದು ಬೆಳಗ್ಗೆ 9:00 ರಿಂದ 12 ರವರೆಗೆ ಸಿಂಧನೂರಿನಲ್ಲಿ ಸಾರ್ವಜನಿಕ ಸಭಾ ಕಾರ್ಯಕ್ರಮ ಹಮ್ಮಿಕೊಂಡಿದ್ದು ಸಿಂಧನೂರಿನ ಎಲ್ಲಾ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿ ಹಾಗೂ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳಿಗೆ ಈ ಪಾದಯಾತ್ರೆಯಲ್ಲಿ ಭಾಗವಹಿಸಿ ಮತ್ತು ಪ್ರೋತ್ಸಾಹಿಸಲು ಕರೆ ನೀಡಲಾಯಿತು.

ಡಾ ಶಿವಕುಮಾರ್ ಅವರು ಮಾತನಾಡಿ ಪಶ್ಚಿಮಘಟ್ಟದ ದಟ್ಟ ಅರಣ್ಯಗಳ ಒಡಲಿನಲ್ಲಿ ಹುಟ್ಟುವ ತುಂಗಭದ್ರೆ ನದಿಯು ತನ್ನ ಉಪನದಿ, ಕಿರುತರೆ, ಹಳ್ಳಗಳ ಮೂಲಕವೂ





ಸದಾಕಾಲ ಹರಿದು ಮಲೆನಾಡು ಬಯಲು ಸೀಮೆ ಭಾಗಗಳಿಗೆ ನೀರುಣಿಸುವ ಮೂಲಕ ಜೀವ ನದಿಯಾಗಿದೆ ಇತ್ತೀಚಿನ ವರ್ಷಗಳಲ್ಲಿ ತುಂಗಭದ್ರೆಯ ಒಡಲಿಗೆ ಭಾರಿ ಪ್ರಮಾಣದಲ್ಲಿ ವಿವಿಧ ರೀತಿಯ ತ್ಯಾಜ್ಯಗಳು ಸೇರುತ್ತಿದ್ದು ನದಿಯ ನೀರನ್ನು ನೇರವಾಗಿ ಬಳಕೆ ಮಾಡದಂತಾಗಿದೆ.

ಅಲ್ಲದೆ ಪಶ್ಚಿಮ ಘಟ್ಟಗಳಲ್ಲಿ ಧಾರಣ ಶಕ್ತಿಗೆ ಮೀರಿ ವಿವಿಧ ಯೋಜನೆ ಕಾಮಗಾರಿಗೆ ಬೃಹತ್ ಪ್ರಮಾಣದ ಅರಣ್ಯ ನಶವಾಗುತ್ತಿದ್ದು ಇದರಿಂದ ಬಯಲು ಸೀಮೆಯು ಬರುಡಾಗಬಹುದು ಎಂದು ಎಚ್ಚರಿಸಿದರು ನದಿಯ ಪವಿತ್ರತೆ ಕಾಪಾಡಲು ಹಾಗೂ ಜಲ ಮೂಲಗಳ ಸಂರಕ್ಷಣೆಗಾಗಿ ಅರಣ್ಯನಾಶ ತಡೆಯಲು ಒತ್ತಾಯಿಸುವುದೇ ತುಂಗಭದ್ರ ಜಲ ಜಾಗೃತಿ, ಜನ ಜಾಗೃತಿ, ಪಾದಯಾತ್ರೆಯ ಮುಖ್ಯ ಉದ್ದೇಶ ವಾಗಿದೆ ಎಂದು ಹೇಳಿದರು. ಹಾಗೂ ವಿವಿಧ ವಿದ್ಯಾ ಸಂಸ್ಥೆಗಳ ಆಡಳಿತ ಮಂಡಳಿ ಇಂದ ತುಂಗಭದ್ರ ಉಳಿಸಿ ಜಾಗೃತಿ ಪಾದಯಾತ್ರೆಯಲ್ಲಿ ನಮ್ಮ ಸಮಸ್ತ ಸಹಯೋಗ ಇರುತ್ತದೆ ಎಂದು ಭರವಸೆ ನೀಡಿದರು. ಈ ಪೂರ್ವಭಾವಿ ಸಭೆಯಲ್ಲಿ ಬಾಲಕೃಷ್ಣ ಮೂರನೇ ಹಂತದ ನಿರ್ಮಲ ತುಂಗಭದ್ರ ಅಭಿಯಾನದ ಸಂಚಾಲಕರು ಮತ್ತು ಡಾ. ಶಿವರಾಜ್ ಮಾಲಿ ಪಾಟೀಲ್, ಈರೇಶ್ ಇಲ್ಲೂರ್ ವಕೀಲರು, ಡಾ ಚನ್ನನಗೌಡ ಪಾಟೀಲ್ ಹಾಗೂ ಸಿಂಧನೂರು ತಾಲೂಕಿನ ವಿವಿಧ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಯವರು ಹಾಗೂ ಪ್ರಾಚಾರ್ಯರು ಮತ್ತು ಉಪನ್ಯಾಸಕರು ಉಪಸ್ಥಿತರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

# ಇಲ್ಮುಲ್ ಜರಾಹತ್ (ಶಸ್ತ್ರಚಿಕಿತ್ಸೆ)

ಯುನಾನಿ ವ್ಯವಸ್ಥೆಯಲ್ಲಿ ಎಂ ಡಿ "ಇಲ್ಮುಲ್ ಜರಾಹತ್" (ಶಸ್ತ್ರಚಿಕಿತ್ಸೆ) ಯುನಾನಿ ಮೆಡಿಸಿನ್ & ಸರ್ಜರಿ (BUMS) ಪದವಿಯೊಳಗಿನ ವಿಶೇಷ ಶಸ್ತ್ರಚಿಕಿತ್ಸಾ ತರಬೇತಿಯನ್ನು ಸೂಚಿಸುತ್ತದೆ, ಇದು ಮಹಿರ್-ಎ-ಜರಾಹತ್ (ಒಖ ಯುನಾನಿ) ನಂತಹ ಸ್ನಾತಕೋತ್ತರ ವಿಶೇಷತೆಗಳಿಗೆ ಕಾರಣವಾಗುತ್ತದೆ, ಇದು ಸಾಂಪ್ರದಾಯಿಕ ಯುನಾನಿ ಚಿಕಿತ್ಸೆ, ಗಿಡಮೂಲಿಕೆ ಪರಿಹಾರಗಳು ಮತ್ತು ಸಮಗ್ರ ಆರೈಕೆಯ ಮೇಲೆ ಕೇಂದ್ರೀಕರಿಸುತ್ತದೆ, ಮೂಲಭೂತ ಶಸ್ತ್ರಚಿಕಿತ್ಸಾ ಕೌಶಲ್ಯಗಳು, ಉಪಕರಣಗಳು ಮತ್ತು ಸಮಗ್ರ ಚಿಕಿತ್ಸೆ ಸೇರಿದಂತೆ ಕೋರ್ಸ್‌ಗಳೊಂದಿಗೆ, ಭಾರತದ ಕಾಲೇಜುಗಳಿಗೆ ಪ್ರವೇಶಕ್ಕಾಗಿ NEET-UG ಅಗತ್ಯವಿರುತ್ತದೆ. ಇಲ್ಮುಲ್ ಜರಾಹತ್ ಕ್ಷೇತ್ರದಲ್ಲಿ ಸಮರ್ಥ ಶಸ್ತ್ರಚಿಕಿತ್ಸಕರು, ಶಿಕ್ಷಣ ತಜ್ಞರು ಮತ್ತು ಸಂಶೋಧಕರನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ ಈ ವಿಭಾಗವನ್ನು 2012 ರಲ್ಲಿ ಸ್ಥಾಪಿಸಲಾಯಿತು. ಇಲ್ಮುಲ್ ಜರಾಹತ್‌ನಲ್ಲಿ ಸ್ನಾತಕೋತ್ತರ ಪದವಿಯ ಮೊದಲ ಬ್ಯಾಚ್‌ಗೆ ಪ್ರವೇಶವು 2014-15ರ ಅಧಿವೇಶನದಿಂದ ಪ್ರಾರಂಭವಾಯಿತು. ರೋಗಿಗಳ ಚಿಕಿತ್ಸೆಯಲ್ಲಿ ಬಳಸುವ ಔಷಧಿಗಳು ಅಥವಾ ಔಷಧಿಗಳು ಯುನಾನಿ, ಆಯುರ್ವೇದ, ಹೋಮಿಯೋಪತಿ ಅಥವಾ ಅಲೋಪತಿ ಆಗಿರಬಹುದು, ಆದರೆ ಇಂದು ಅಳವಡಿಸಿಕೊಂಡಿರುವ ಶಸ್ತ್ರಚಿಕಿತ್ಸಾ ವಿಧಾನಗಳು ಅಥವಾ ಜರಾಹತ್ ಸಂಪೂರ್ಣವಾಗಿ ಮುಂದುವರಿದಿದ್ದು, ಪ್ರಪಂಚದಾದ್ಯಂತ ಸಾರ್ವತ್ರಿಕವಾಗಿ ಸ್ವೀಕಾರಾರ್ಹವಾಗಿವೆ. ಅದೇ ಗುರಿಯನ್ನು ಗಮನದಲ್ಲಿಟ್ಟುಕೊಂಡು, ಶಸ್ತ್ರಚಿಕಿತ್ಸಾ ರೋಗಿಗಳಲ್ಲಿ ಶಸ್ತ್ರಚಿಕಿತ್ಸೆಗೆ ಮುನ್ನ, ಶಸ್ತ್ರಚಿಕಿತ್ಸೆಯ ನಂತರ ಹಾಗೂ ಶಸ್ತ್ರಚಿಕಿತ್ಸಾ ಕಾಯಿಲೆಗಳ ಸಂಪ್ರದಾಯವಾದಿ ಚಿಕಿತ್ಸೆಯಲ್ಲಿ ಯುನಾನಿ ಔಷಧಿಗಳನ್ನು ಬಳಸಲು ನಾವು ಪ್ರಯತ್ನಿಸುತ್ತಿದ್ದೇವೆ. ಪ್ರಸ್ತುತ, ಇಲಾಖೆಯು ಕೊಲೆಸಿಸ್ಟೆಕ್ಟಮಿ, ಅಪೆಂಡಿಸೆಕ್ಟಮಿ, ಹೆಮೊರೊಯಿಡೆಕ್ಟಮಿ, ಸುನ್ನತಿ, ಆನೋದಲ್ಲಿ ಫಿಸ್ಟುವಲ್, ಆನೋದಲ್ಲಿ ಫಿಷರ್, ಹೈಡ್ರೋಸೆಲೆಕ್ಟಮಿ, ವೆರಿಕೋಸೆಲೆಕ್ಟಮಿ, ವೆರಿಕೋಸ್ ವೇನ್‌ನ ಸ್ಟ್ರಿಪ್ಪಿಂಗ್ ಮತ್ತು ಲಿಗೇಶನ್, ವೆರಿಕೋಸೆಲೆಕ್ಟಮಿ, ಬಾವು ಒಳಚರಂಡಿ, ಚೀಲ ತೆಗೆಯುವಿಕೆ, ಲಿಪೊಮಾಗಳ ಛೇದನ, ನ್ಯೂರೋಫೈಬ್ರೊಮಾಗಳು ಮತ್ತು ಎಲ್ಲಾ ಇತರ ಚರ್ಮದ ಗೆಡ್ಡೆಗಳ ಛೇದನ ಮತ್ತು ಬಯಾಪ್ಸಿಗಳು, ಪೈಲೋನೈಡಲ್ ಸೈನಸ್, ಹರ್ನಿಯಾಗಳು ಮತ್ತು ಮಧುಮೇಹ ಪಾದ, ಸ್ತನದ ಫೈಬ್ರೊಡೆನೊಮಾ ಇತ್ಯಾದಿಗಳನ್ನು ಸ್ಥಳೀಯ, ಪ್ರಾದೇಶಿಕ ಮತ್ತು ಬೆನ್ನುಮೂಳೆಯ ಅರಿವಳಿಕೆ ಅಡಿಯಲ್ಲಿ ನಡೆಸಲಾಗುತ್ತಿದೆ. ಎಲ್ಲಾ ಶಸ್ತ್ರಚಿಕಿತ್ಸೆಗಳನ್ನು ತಜ್ಞರ ಮಾರ್ಗದರ್ಶನದಲ್ಲಿ ಮತ್ತು ಅಸೆಪ್ಟಿಕ್ ಪರಿಸರದಲ್ಲಿ ಮತ್ತು ಪ್ರಮಾಣಿತ ಶಸ್ತ್ರಚಿಕಿತ್ಸಾ ವಿಧಾನಗಳನ್ನು ಅನುಸರಿಸಲಾಗುತ್ತಿದೆ. ಶಸ್ತ್ರಚಿಕಿತ್ಸೆಗಳ ಸಂಖ್ಯೆಯಲ್ಲಿ ವಾರ್ಷಿಕವಾಗಿ ಗಮನಾರ್ಹ ಏರಿಕೆ ಕಂಡುಬಂದಿದೆ. ವಿಭಾಗದ ಅಧ್ಯಾಪಕರು ಬೋಧನೆ ಮತ್ತು ಸಂಶೋಧನಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಈ ವಿಭಾಗವು ಸ್ನಾತಕೋತ್ತರ ಮಟ್ಟದಲ್ಲಿ ತರಗತಿ ಕೊಠಡಿ ಬೋಧನೆ, ಶಸ್ತ್ರಚಿಕಿತ್ಸೆಯ ನಂತರದ ಅವಧಿಯಲ್ಲಿ ಶಸ್ತ್ರಚಿಕಿತ್ಸಾ ವಿಧಾನಗಳ ಬೋಧನೆ, ವಾರ್ಡ್ ಬೋಧನೆ, ಪ್ರಕರಣ ಪ್ರಸ್ತುತಿ ಮತ್ತು ಸೆಮಿನಾರ್ ಪ್ರಸ್ತುತಿಗಳ ಮೂಲಕ ಉತ್ತಮ ಗುಣಮಟ್ಟದ ಬೋಧನೆ ಮತ್ತು ತರಬೇತಿಯನ್ನು ನೀಡುತ್ತಿದೆ. ಹೊರರೋಗಿ ವಿಭಾಗ, ಐಪಿಡಿ, ಮಧ್ಯವರ್ತಿ ವಿಭಾಗ ಕರ್ತವ್ಯಗಳನ್ನು ನಿಯಮಿತವಾಗಿ ನಡೆಸಲಾಗುತ್ತದೆ. ಕಾಲಕಾಲಕ್ಕೆ ವೈದ್ಯಕೀಯ ಶಿಬಿರಗಳನ್ನು ಆಯೋಜಿಸಲಾಗುತ್ತದೆ. ಶಸ್ತ್ರಚಿಕಿತ್ಸಾ ಕಾಯಿಲೆಗಳಲ್ಲಿ ಯುನಾನಿ ಔಷಧಿಗಳ ಕ್ಲಿನಿಕಲ್ ಪ್ರಯೋಗ ಪ್ರಗತಿಯಲ್ಲಿದೆ.

# ರಾಯಚೂರು ಗ್ರಾಮೀಣ ಪ್ರದೇಶದಲ್ಲಿ ಡಿ. 22ರಂದು ವಿದ್ಯುತ್ ವ್ಯತ್ಯಯ

**❑ ನೈಜ್ಯ ದೆಸೆ ನ್ಯೂಸ್**

**ರಾಯಚೂರು: ಡಿಸೆಂಬರ್ 19 (ಕರ್ನಾಟಕ ವಾರ್ತೆ): ಇಲ್ಲಿನ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ವ್ಯಾಪ್ತಿಯ 110/11 ಕೆವಿ ಮಲಿಯಾಬಾದ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಡಿಸೆಂಬರ್ 22ರ ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆವರೆಗೆ ಮಲಿಯಾಬಾದ ವಿದ್ಯುತ್ ಉಪ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು,**

ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾಧಿಕಾರಿಗಳು, ಪಾಲಿಕೆ ಆಯುಕ್ತರ ನಿರ್ದೇಶನ ರಾಯಚೂರು ಸಿಟಿಯ ಹೋಟೆಲ್, ರೆಸ್ಟೋರೆಂಟ್‌ಗಳ ಮೇಲೆ ಮುಂದುವರೆದ ದಾಳಿ: ಆಹಾರದ ಗುಣಮಟ್ಟ, ಶುಚಿತ್ವ ಪರಿಶೀಲನೆ

**❑ ನೈಜ್ಯ ದೆಸೆ ನ್ಯೂಸ್**






**ರಾಯಚೂರು: ಡಿಸೆಂಬರ್ 19 (ಕರ್ನಾಟಕ ವಾರ್ತೆ): ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಹಾಗೂ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸಾರ್ವಜನಿಕ ಹಿತದೃಷ್ಟಿಯಿಂದಾಗಿ ನೀಡಿದ ನಿರ್ದೇಶನದ ಮೇರೆಗೆ ರಾಯಚೂರು ವಿಭಾಗದ ಸಹಾಯಕ ಆಯುಕ್ತರಾದ ಗಜಾನನ ಬಾಳೆ ಹಾಗೂ ಇನ್ನಿತರ ಅಧಿಕಾರಿಗಳ ನೇತೃತ್ವದಲ್ಲಿ ಡಿ.18ರಂದು ಸಂಜೆ ಹೊತ್ತಿಗೆ ರಾಯಚೂರು ಸಿಟಿಯಲ್ಲಿನ ಕೆಲ ಹೊಟೆಲಗಳು ಮತ್ತು ರೆಸ್ಟೊರೆಂಟಗಳ ಮೇಲೆ ದಾಳಿ ನಡೆಸಿ ಪರಿಶೀಲಿಸಿದರು.**

ರಾಯಚೂರು ಮಹಾನಗರ ಪಾಲಿಕೆಯ ಸಮಿತಿ ಕಾರ್ಯದರ್ಶಿ ಶ್ರೀಕೃಷ್ಣ ಶಾವಂತಗೇರಿ, ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮ್ಮದ್, ರಾಯಚೂರು ತಾಲೂಕು ತಹಶೀಲ್ದಾರ್ ಸುರೇಶ ವರ್ಮಾ, ಮಹಾನಗರ ಪಾಲಿಕೆಯ ಆರೋಗ್ಯಾಧಿಕಾರಿ ಡಾ.ಮಹಮ್ಮದ್ ಶಾಕೀರ್ ಮೊಹಿಯುದ್ದಿನ್, ಪಾಲಿಕೆ ಸಂಘಟನಾಧಿಕಾರಿ ಕೃಷ್ಣ ಕಟ್ಟಿಮನಿ ಮತ್ತು ಪಾಲಿಕೆ ನಿರೀಕ್ಷಣಾಧಿಕಾರಿಗಳು ಮತ್ತು ಇನ್ನೀತರರನ್ನು ಒಳಗೊಂಡ ಅಧಿಕಾರಿಗಳು ಮತ್ತು ಸಿಬ್ಬಂದಿಯ ತಂಡವು ಸ್ಟೇಷನ್ ರಸ್ತೆ ಸೇರಿದಂತೆ ನಗರದ ವಿವಿಧ ಹೋಟೆಲ್ ಹಾಗೂ ರೆಸ್ಟೋರಂಟ್‌ಗಳ ಮೇಲೆ ದಾಳಿ ನಡೆಸಿ,

ಅಲ್ಲಿ ತಯಾರಿಸಿದ್ದ ಬೇರೆ ಬೇರೆ ನಮೂನೆಯ ಉಪಹಾರ ಮತ್ತು ಊಟದ ಆಹಾರದ ಗುಣಮಟ್ಟ, ಅಲ್ಲಿನ ಶುಚಿತ್ವ, ಅಡುಗೆ ತಯಾರಕರ ಆರೋಗ್ಯ, ಲೈಸೆನ್ಸ್ ಮತ್ತು ಇನ್ನೀತರ ವಿಷಯಗಳ ಬಗ್ಗೆ ಸಮಗ್ರ ಪರಿಶೀಲಿಸಿ, ದುರವಸ್ಥೆ ಕಂಡು ಬಂದ ಕಡೆಗಳಲ್ಲಿನ ಹೊಟೆಲ್ ಹಾಗೂ ರೆಸ್ಟೊರೆಂಟಗಳ ಮೇಲೆ ದಂಡ ವಿದಿಸಿ, ಸರಿಪಡಿಸಿಕೊಳ್ಳಲು ಎಚ್ಚರಿಕೆ ನೀಡಿದರು. ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿನ ಪ್ರಮುಖ ಹೋಟೆಲ್‌ಗಳ ಮೇಲೆ ದಾಳಿ ನಡೆಸಿ ಅಲ್ಲಿನ ಅಡುಗೆ ಕೋಣೆಗಳಿಗೆ ಪ್ರವೇಶಿಸಿ ಆಹಾರ ಸಿದ್ಧತೆಯ ಪರಿ, ಕುಡಿವ ನೀರು ಸಂಗ್ರಹಕ್ಕೆ ಬಳಸಿದ ತೊಟ್ಟಿ ಮತ್ತು ಅಡುಗೆಗೆ ಬಳಸುವ ಪದಾರ್ಥಗಳನ್ನು ಪರಿಶೀಲಿಸಿದರು.

ಅಡುಗೆಗೆ ಸಂಗ್ರಹಿಸಿದ ದವಸ-ಧಾನ್ಯಗಳ ಗುಣಮಟ್ಟ, ತರಕಾರಿಗಳು, ಖರೀದಿಸಿದ್ದ ಕೆಲ ಪದಾರ್ಥಗಳ ಕಾಲಾವಧಿ ವಿವರ, ಅಡುಗೆ ಎಣ್ಣೆ, ಉಪ್ಪಿನ ಗುಣಮಟ್ಟದ ಪ್ರಮಾಣವನ್ನು ಪರಿಶೀಲಿಸಿದರು. ಕೆಲ ಹೋಟೆಲ್‌ಗಳಲ್ಲಿ ಹಾಕಿದ್ದ ಉಪಹಾರ ಮತ್ತು ಊಟದ ದರಪಟ್ಟಿಯ ಬಗ್ಗೆ ಸಹ ಪರಿಶೀಲನೆ ಮಾಡಿದರು. ಈ ವೇಳೆ ರಾಯಚೂರು ವಿಭಾಗದ ಸಹಾಯಕ ಆಯುಕ್ತರು ಮಾತನಾಡಿ, ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಕಾಯ್ದೆ 2006ರ ಹಾಗೂ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ನಿಯಮಗಳು 2011ರ ಸೂಚನೆಗಳನ್ನು ಕಡ್ಡಾಯ ಅನುಸರಿಸಬೇಕು. ಈ ಸುಧಾರಣಾ ಸೂಚನೆಗಳನ್ನು ಅನುಸರಿಸಲು ವಿಫಲವಾದರೆ ಹೊಟೆಲ್ ರೆಸ್ಟೊರೆಂಟಗಳ ಪರವಾನಿಗೆಯನ್ನು ಅಮಾನತುಗೊಳಿಸಿ ಕಾನೂನು ಕ್ರಮಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

# ಉಚಿತ ಆರೋಗ್ಯ ತಪಾಸಣಾ ಶಿಬಿರ :ಗಾಂಧಿನಗರ






**❑ ನೈಜ್ಯ ದೆಸೆ ನ್ಯೂಸ್**

**ಶ್ರೀ ವಿಶ್ವೇಶ್ವರ ಸೇವಾ ಸಮಿತಿ ಗಾಂಧಿನಗರ ಶ್ರೀ ಸ್ವಾಮಿ ವಿವೇಕಾನಂದ ಸೇವಾ ಸಂಘ ಶ್ರೀ ರಾಮನಗರ, ಸಪ್ತಗಿರಿ ಆಸ್ಪತ್ರೆ ಬೆಂಗಳೂರು ಹಾಗೂ ಸನ್ ರೈಸ್ ಡಿ ಫಾರ್ಮಸಿ, ನರ್ಸಿಂಗ್, ಪ್ಯಾರಾಮೆಡಿಕಲ್ ಕಾಲೇಜ್ ಸಿಂಧನೂರು ಇವರ ಸಂಯುಕ್ತಾಕ್ಷರದಲ್ಲಿ ಉಚಿತ ಹೃದಯ,**

ನರರೋಗ ಕ್ಯಾನ್ಸರ್ ಮೂತ್ರಪಿಂಡ ಕಲ್ಲು ಕಾಯಿಲೆಗಳ ತಪಾಸಣಾ ಶಿಬಿರ ಗಾಂಧಿನಗರದಲ್ಲಿ ಜರುಗಿತು ಕಾರ್ಯಕ್ರಮವನ್ನು ದೀಪ ಬೆಳಸುವುದರ ಮುಖಾಂತರ ಸಪ್ತಗಿರಿ ಆಸ್ಪತ್ರೆಯ ವೈದ್ಯರುಗಳು ಮತ್ತು ಶ್ರೀ ಭಾಸ್ಕರ್ ರಾವ್, ಶ್ರೀ ಚಿತ್ತೂರಿ ಶ್ರೀನಿವಾಸ್ ,ಸನ್ ರೈಸ್ ಕಾಲೇಜಿನ ಪ್ರಾಚಾರ್ಯರಾದ ಲಾಜರ್ ಸಿರಿಲ್ ಜಿ ದೀಪ ಬೆಳಗುವುದರ ಮುಖಾಂತರ ಉದ್ಘಾಟಿಸಿದರು ಸಪ್ತಗಿರಿ ಆಸ್ಪತ್ರೆಯ ವೈದ್ಯರುಗಳು ಇಂತಹ ಗ್ರಾಮೀಣ ಭಾಗದಲ್ಲಿ ಉಚಿತ ಆರೋಗ್ಯ ತಪಾಸಣೆ ಮಾಡುವುದು ನಮಗೆ ಸಂತೋಷವನ್ನು ನೀಡುತ್ತದೆ ಎಂದು ತಿಳಿಸಿದರು, ಇದೇ ಸಂದರ್ಭದಲ್ಲಿ ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ನ ಪ್ರಾಚಾರ್ಯರಾದ ಲಾಜರ್ ಸಿರಿಲ್ ಅವರು ಮಾತನಾಡಿ ಸಪ್ತಗಿರಿಯ ಆಸ್ಪತ್ರೆಯ ವೈದ್ಯರುಗಳ ಸೇವೆಯನ್ನು ಹಿಂದಿನ ನಾನು ನೋಡಿದ್ದೇನೆ ಅವರು ಅತ್ಯುತ್ತಮ ಸೇವೆಯನ್ನು ಗ್ರಾಮೀಣ ಭಾಗದ ಜನಕ್ಕೆ ನೀಡುವುದರ ಜೊತೆಗೆ ಉಚಿತ ಶಸ್ತ್ರಚಿಕಿತ್ಸೆಗಳನ್ನ ಮಾಡಿ ಗ್ರಾಮೀಣ ಭಾಗದ ಜನರಿಗೆ ವರದಾನವಾಗಿದ್ದಾರೆ ಎಂದು ತಿಳಿಸಿದರು.

ಮತ್ತು ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ನ ವಿದ್ಯಾರ್ಥಿಗಳು ಸದಾ ಈತರ ಉಚಿತ ಆರೋಗ್ಯ ತಪಾಸಣೆಗೆ ಸಹಾಯ ನೀಡಲು ಸಹಕಾರ ನೀಡಲು ನಾವು ಸಿದ್ಧರಿದ್ದೇವೆ ಎಂದು ತಿಳಿಸಿದರು, ಉಚಿತ ಆರೋಗ್ಯ ತಪಾಸಣೆ ಶಿಬಿರದಲ್ಲಿ ಸುಮಾರು 200 ರೋಗಿಗಳನ್ನು ತಪಾಸಣೆ ಮಾಡಿ 30 ಇಸಿಜಿ ಹಾಗೂ 25 ಎಕೋ ಪರೀಕ್ಷೆಗಳನ್ನು ಸಂಪೂರ್ಣವಾಗಿ ಉಚಿತವಾಗಿ ಮಾಡಲಾಯಿತು ಹಾಗೂ ಹೆಚ್ಚಿನ ಚಿಕಿತ್ಸೆ ಅವಶ್ಯಕತೆ ಇರುವ ರೋಗಿಗಳನ್ನು ಸಪ್ತಗಿರಿ ಆಸ್ಪತ್ರೆ ಬೆಂಗಳೂರಿಗೆ ರೆಫರ್ ಮಾಡಲಾಯಿತು ಇದೇ ಸಂದರ್ಭದಲ್ಲಿ ಉಚಿತ ಆರೋಗ್ಯ ತಪಾಸಣೆಯ ಶಿಬಿರ ನೇತೃತ್ವವನ್ನು ಶ್ರೀ ಭಾಸ್ಕರ್ ರಾವ್ ವಹಿಸಿಕೊಂಡಿದ್ದರು ಹಾಗೂ ಚಟ್ಟೂರಿ ಶ್ರೀನಿವಾಸ್ ಇವರು ಸಹ ಅತ್ಯಂತ ಉತ್ಸಾಹದಿಂದ ಉಚಿತ ಆರೋಗ್ಯ ತಪಾಸಣೆಯ ಕೆಲಸ ಕಾರ್ಯಗಳನ್ನು ನಿರ್ವಹಿಸಿದರು ಇದೇ ಸಂದರ್ಭದಲ್ಲಿ ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ನ ವಿದ್ಯಾರ್ಥಿಗಳು ಆರೋಗ್ಯ ಯೋಧರಾಗಿ ತಮ್ಮ ಅಮೂಲ್ಯ ಸೇವೆಯನ್ನು ಸಲ್ಲಿಸಿದರು ಸುತ್ತಮುತ್ತಲಿನ ಗ್ರಾಮಸ್ಥರು ಹಾಗೂ ಗಾಂಧಿನಗರದ ಗುರು ಹಿರಿಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಉಚಿತ ತಪಾಸಣಾ ಆರೋಗ್ಯ ಶಿಬಿರವನ್ನು ಯಶಸ್ವಿಗೊಳಿಸಿದರು.

# ಕಿರಣ್ ಕುಮಾರ್ ಚಿಕ್ಕ ಹೆಸರೂರು ಇವರಿಗೆ. ಸಮಾಜ ಸೇವೆ ಹಾಗೂ ಕ್ರೀಡಾ ಕ್ಷೇತ್ರದ ಅಮೋಘ ಸೇವೆಗಾಗಿ.ಒಲಿದು ಬಂದ ಸಮಾಜ ಸೇವೆ ಮತ್ತು ಕ್ರೀಡಾ ರತ್ನ ರಾಷ್ಟ್ರ ಪ್ರಶಸ್ತಿ.

**❑ ನೈಜ್ಯ ದೆಸೆ ನ್ಯೂಸ್**




**ಲಿಂಗಸಗೂರು: ಲಿಂಗಸಗೂರು ತಾಲೂಕ ಚಿಕ್ಕ ಹೆಸರೂರು ಗ್ರಾಮದ ಕಿರಣ್ ಕುಮಾರ್ ಇವರು ಕರ್ನಾಟಕ ಜನ ಜಾಗೃತಿ ಸಮಿತಿ ಅಧ್ಯಕ್ಷರು ಹಾಗೂ ಪ್ರಸ್ತುತವಾಗಿ ಎಂ ವಿಶ್ವೇಶ್ವರಯ್ಯ ಪಿಯು ಮ್ಯಾನೇಜರ್ ಮತ್ತು ಫಿಸಿಕಲ್ ಎಜುಕೇಶನ್ ಡೈರೆಕ್ಟರ್ ಆಗಿ ಕೆಲಸ ನಿರ್ವಹಿಸುತ್ತಿರುವ ಇವರು.**

ಶ್ರೀ ಚಿನ್ನಪ್ಪ ಮರಿಯಮ್ಮ ದಂಪತಿಗಳಿಗೆ 4 ಜನ ಸೋದರರು,2ಸಹೋದರಿಯರು.ಕಿರಣ್ ಕುಮಾರ್ ತಮ್ಮ ವಿದ್ಯಾಭ್ಯಾಸವನ್ನು ಮುದುಗಲ್ಲು ಹಾಗೂ ಬಳ್ಳಾರಿಯಲ್ಲಿ ತಮ್ಮ ವಿದ್ಯಾಭ್ಯಾಸವನ್ನು ಮುಗಿಸಿ.2001-03 ವರೆಗೆ ಬಿಡಿ ಡಿಎಸ್ ಸಂಸ್ಥೆಯಲ್ಲಿ ಸೇವೆ ಸಲ್ಲಿಸಿದ ಇವರು.ನಂತರ 2003 -06 ವರೆಗೆ ಜಲನಯನ ಯೋಜನೆ ಅಡಿಯಲ್ಲಿ ಫೀಲ್ಡ್ ಗೈಡ್ ಆಗಿ ಕಾರ್ಯನಿರ್ವಹಿಸಿದ್ದಾರೆ.ಹಾಗೂ ಸಮುದಾಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ತುಮಕೂರಿನಲ್ಲಿ ಹಾಸನ ಅರಣ್ಯ ಪ್ರದೇಶಕ್ಕೆ ವಿಭಾಗ 2011 ರಿಂದ 2024ರ ಸಮನ್ವಯ ಅಧಿಕಾರಿಯಾಗಿ ಮೈಸೂರು ವಿಭಾಗ ಬಂಡಿಪುರ ವಿಭಾಗ, ಹುಣಸೂರು ವಿಭಾಗ,ಕೊಳ್ಳೇಗಾಲ ವಿಭಾಗ, ಬೆಂಗಳೂರು ಗ್ರಾಮಾಂತರ ವಿಭಾಗ,ಈ ಪ್ರದೇಶ ಅರಣ್ಯ ವಿಭಾಗದಲ್ಲಿ ನಮ್ಮ ಸೇವೆಯನ್ನು ಸಲ್ಲಿಸಿರುತ್ತಾರೆ.

ಲಿಂಗಸಗೂರಿನ ಲಿಟಲ್ ಫ್ಲವರ್ ಇಂಗ್ಲೀಷ್ ಮೀಡಿಯಂ ಸ್ಕೂಲ್ನಲ್ಲಿ ದೈಹಿಕ ಶಿಕ್ಷಕರಾಗಿ ಮಕ್ಕಳನ್ನು ಕ್ರೀಡೆಯಲ್ಲಿ ಉತ್ತಮ ಸ್ಥಾನ ಪಡೆಯುವಂತೆ ಕ್ರೀಡಾ ಲೋಕದಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡುವುದಕ್ಕೆ ಪ್ರೇರಣೆ ಆಗಿದ್ದಾರೆ.ಪ್ರಸ್ತುತವಾಗಿ ಇವರು ಲಿಂಗಸಗೂರಿನ ಸರ್ ಎಂ ವಿಶ್ವೇಶ್ವರಯ್ಯ ಪದವಿ ಪೂರ್ವ ಪಿ ಯು ಕಾಲೇಜ್ ಲಿಂಗಸಗೂರಿನಲ್ಲಿ ದೈಹಿಕ ಶಿಕ್ಷಕ ನಿರ್ದೇಶಕರಾಗಿ ತಾಲೂಕ,ಜಿಲ್ಲಾ,ಹಾಗೂ ರಾಜ್ಯಮಟ್ಟದಲ್ಲಿ ಅನೇಕ ಪ್ರಶಸ್ತಿಗಳನ್ನು ತಂದುಕೊಡುವಲ್ಲಿ ಪ್ರಮುಖ ಪಾತ್ರ ವಹಿಸಿರುತ್ತಾರೆ.ಅದೇ ರೀತಿ ಭಾರತ ಸ್ಕೌಟ್ ಅಂಡ್ ಗೈಡ್ಸ್ ನಲ್ಲಿ ಮೂಡುಬಿದರಿಯಲ್ಲಿ ನಡೆದ ಇಂಟರ್ನ್ಯಾಷನಲ್ ಜಾಂಬೂರಿಯಲ್ಲಿ ವಿದ್ಯಾರ್ಥಿಗಳನ್ನು ಒಳಗೊಂಡು ಅವರು ಸಹ ಭಾಗವಹಿಸಿದ್ದರು.

ಎಲ್ಲಾ ಕಾರ್ಯ ಸಾಧನೆಗಳನ್ನು ಗುರುತಿಸಿದ ಹೈದರಾಬಾದಿನ ಸೆಂಟ್ರಲ್ ಫೈನ್ ಆರ್ಟ್ಸ್ ಫೌಂಡೇಶನ್ ಹಾಗೂ ಸ್ನೇಹ ಯುತ್ ಕಲ್ಚರ್ ಅಸೋಸಿಯೇಷನ್ ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ತ್ಯಾಗರಾಯ ಗಣಸಭಾ ಚಿಕ್ಕಲ್ಲಪಲ್ಲೆ ಹೈದರಾಬಾದ್ ನಲ್ಲಿ ನಡೆದಂತ ಸುಂದರ ಕಾರ್ಯಕ್ರಮದಲ್ಲಿ.ಶ್ರೀ ರೋಯಿಯೂರ್ ಶೇಷ ಸಾಯಿ. ಡಾ.ವೇದನಾಥ ನಾಗ ಚಲಪತಿ ರಾವ್ ,ಡಾ.ವನಜ ಉದಯ್,ರಂಜಿತ್ ಕುಮಾರ್ ಎಂ,ಡಾ. ಹುಲಿಗೆಮ್ಮ ಅಮ್ಮನವರು ,ಮೌನದ್ದೀನ್ ಬೂದಿನಾಳ ,ಹಾಗೂ ಅನೇಕ ಗಣ್ಯರ ಸಮ್ಮುಖದಲ್ಲಿ ಶ್ರೀ ಕಿರಣ್ ಕುಮಾರ್ ಇವರಿಗೆ ಸಮಾಜ ಸೇವೆ ಹಾಗೂ ಕ್ರೀಡಾ ರತ್ನ ರಾಷ್ಟ್ರಪ್ರಶಸ್ತಿ ನೀಡಿ ಗೌರವಿಸಲಾಯಿತು.ಶ್ರೀ ಕಿರಣ್ ಕುಮಾರ್ ಇವರಿಗೆ ಸಮಾಜ ಸೇವಾ ಹಾಗೂ ಕ್ರೀಡಾ ರತ್ನ ರಾಷ್ಟ್ರ ಪ್ರಶಸ್ತಿ ಲಭಿಸಿದ್ದಕ್ಕೆ ತಂದೆ ತಾಯಿಗಳು ಹಾಗೂ ಗೆಳೆಯರ ಬಳಗ ಮತ್ತು ಕರ್ನಾಟಕ ಜನ ಜಾಗೃತಿ ಸಮಿತಿಯ ಸದಸ್ಯರು ಹಾಗೂ ಸರ್ ಎಂ ವಿಶ್ವೇಶ್ವರಯ್ಯ ಪಿಯು ಕಾಲೇಜಿನ ಪ್ರಿನ್ಸಿಪಾಲ್ ಹಾಗೂ ಎಲ್ಲಾ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಇವರಿಗೆ ಶುಭ ಹಾರೈಸಿ ಅಭಿನಂದನೆ ಸಲ್ಲಿಸಿದರು.

# ಕಲಕೇರಿ ಗ್ರಾಮದ ಧಾರ್ಮಿಕ ಸಮಾರಂಭದಲ್ಲಿ ಕೇದಾರ ಜಗದ್ಗುರುಗಳ ಅಭಿಮತ ಮಾನವೀಯ ಮೌಲ್ಯಗಳಿಂದ ಮನುಷ್ಯ ಜನ್ಮ ಸಾರ್ಥಕ

**❑ ನೈಜ್ಯ ದೆಸೆ ನ್ಯೂಸ್**



**ತಾಳಿಕೋಟಿ: ಧರ್ಮದ ತಳಹದಿಯ ಮೇಲೆ ಶಿಕ್ಷಣ ಮತ್ತು ಸಂಸ್ಕಾರಗಳನ್ನು ನೀಡುವ ಮೂಲಕ ಮಠಮಾನ್ಯಗಳು ಮಾನವ ಕಲ್ಯಾಣ ಕೇಂದ್ರಗಳಾಗಿ ಅನಾದಿ ಕಾಲದಿಂದಲೂ ಮಾನವರನ್ನು ಉದ್ಧರಿಸುವ ಕಾರ್ಯ ಮಾಡುತ್ತಾ ಬಂದಿದ್ದು, ಈ ದಿಸೆಯಲ್ಲಿ ದಾನ ಧರ್ಮದ ಗುಣಗಳನ್ನು ಪ್ರತಿಯೊಬ್ಬರೂ ಅನುಸರಿಸಿ ನಡೆದಾಗ ಮಾತ್ರ ಉದಾತ್ತ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದು ಕೇದಾರ ಪೀಠದ ಜಗದ್ಗುರು ಭೀಮಾಶಂಕರಲಿಂಗ ಶಿವಾಚಾರ್ಯ ಭಗವತ್ಪಾದಂಗಳವರು ಹೇಳಿದರು.**

ತಾಳಿಕೋಟಿ ತಾಲೂಕಿನ ಕಲಕೇರಿ ಗ್ರಾಮದ ಜೆ ಜೆ ಶಿಕ್ಷಣ ಸಂಸ್ಥೆಯ ಆವರಣದ ಮಹಾಮಠದಲ್ಲಿ ಜಗದಾರಾಧ್ಯ ಜಯಶಾಂತಲಿಂಗೇಶ್ವರ ಮಹಾ ಸಂಸ್ಥಾನಮಠ ಜಾಲಹಳ್ಳಿ-ಕಲಕೇರಿಯ ಪೀಠಾಧಿಪತಿಗಳಾದ ಶಿವಾಚಾರ್ಯ ರತ್ನ ಜಗದಾರಾಧ್ಯ ಜಯಶಾಂತಲಿಂಗೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳವರ 70ನೇ ವರ್ಷದ ಹುಟ್ಟುಹಬ್ಬದ ವರ್ಧಂತಿ ಮಹೋತ್ಸವ ಹಾಗೂ ಅಭಿನಂದನಾ ಸಮಾರಂಭ ಸೇರಿದಂತೆ ವಿವಿದ ಧಾರ್ಮಿಕ ಕಾರ್ಯಕ್ರಮಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು. ಶಕ್ತಿವಂತರರು ರಕ್ಷಣೆ ಮಾಡುವುದು, ಸಿರಿವಂತರರು ದಾನ ಮಾಡುವುದು, ಅಧಿಕಾರದಲ್ಲಿದ್ದವರು ಬಡವರ ಸೇವೆ ಮಾಡುವ ಮೂಲಕ ಸಮಾಜದಲ್ಲಿ ಸಮಾನತೆ, ಸಹಬಾಳ್ವೆ ಬೆಳೆಸಿ ಮಾನವೀಯ ಮೌಲ್ಯಗಳನ್ನು ಎತ್ತಿ ಹಿಡಿಯುವ ಕೆಲಸವಾಗಬೇಕು ಅಂದಾಗ ಮನುಷ್ಯ ಜನ್ಮ ಸಾರ್ಥಕವಾಗುತ್ತದೆ ಎಂದು ಅವರು ಹೇಳಿದರು. ಭಗವಂತನ ಪ್ರತಿರೂಪದಂತಿರುವ ಗುರುವಿನ ಮಠಗಳು ಬೆಳೆದಾಗ ಸಮಾಜದ ಉದ್ದಾರವಾಗಲು ಸಾಧ್ಯವಾಗುತ್ತದೆ.

ಯಾವತ್ತೂ ಮಠಗಳು ಶಿಕ್ಷಣ, ಅನ್ನ, ಅರಿವೆ ಜೊತೆಗೆ ಭವರೋಗದ ನಿವಾರಣಾ ಕೇಂದ್ರಗಳಾಗಿ ಕಾರ್ಯ ಮಾಡುತ್ತಿದ್ದು, ಈ ನಿಟ್ಟಿನಲ್ಲಿ ಜಾಲಹಳ್ಳಿ ಜಗದಾರಾಧ್ಯ ಜಯಶಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಈ ಭಾಗದಲ್ಲಿ ಹಲವು ಮಠಗಳನ್ನು ಸ್ಥಾಪಿಸುವ ಮೂಲಕ ಅಸಂಖ್ಯಾತ ಭಕ್ತಬಳಗವನ್ನು ಹೊಂದುವ ಮೂಲಕ ಭಕ್ತರನ್ನು ಉದ್ಧಾರ ಮಾಡುವ ಕಾರ್ಯದಲ್ಲಿ ತೊಡಗಿದ್ದು, ಅಂತಹ ಗುರುಗಳ ಮಠಗಳು ಬೆಳವಣಿಗೆಯಾಗಲು ನಾವೆಲ್ಲ ದಾನ ಧರ್ಮದ ಕಾರ್ಯದಲ್ಲಿ ತೊಡಗಿಕೊಳ್ಳಬೇಕು ಎಂದು ಸಣ್ಣ ಕೈಗಾರಿಕಾ ಸಚಿವರಾದ ಶರಣಬಸಪ್ಪ ದರ್ಶನಾಪುರ ಹೇಳಿದರು. ಇದೇ ವೇಳೆ ಜಾಲಹಳ್ಳಿ ಶ್ರೀಗಳ ಜೀವನ ಚರಿತ್ರೆ ಕುರಿತಾದ ಚಾಣಕ್ಯ ಪ್ರಕಾಶನದಿಂದ ಹೊರತಂದಿರುವ ಸಾಹಿತಿ ಮನು ಪತ್ತಾರ ಅವರು ಬರೆದಿರುವ 'ಭಾಗ್ಯವಿದಾತ' ಜೀವನ ಚರಿತ್ರೆ ಪುಸ್ತಕವನ್ನು ಕೇದಾರ ಜಗದ್ಗುರು ಮಹಾಸನ್ನಿಧಿಯವರು ಮತ್ತು ಸಣ್ಣ ಕೈಗಾರಿಕಾ ಸಚಿವರಾದ ಶರಣಬಸಪ್ಪ ದರ್ಶನಾಪುರ ಬಿಡುಗಡೆಗೊಳಿಸಿದರು.

ಇದೇ ವೇಳೆ ಜಾಲಹಳ್ಳಿ ಶ್ರೀಗಳಿಗೆ ಅನೇಕ ಭಕ್ತರು ತುಲಾಭಾರ ಸೇವೆ ಮಾಡುವ ಮೂಲಕ ಧನ್ಯತಾಭಾವ ಮೆರೆದರು. ಹಾಗೂ ಮಣ್ಣೇರಿ ಗ್ರಾಮದಿಂದ ಆಗಮಿಸಿದ ನಂದಿ(ಎತ್ತು)ಯನ್ನು ಹಣ್ಣು ಹಂಪಲು ಮತ್ತು ಕಬ್ಬಿನಿಂದ ತುಲಾಭಾರ ಸೇವೆ ಮಾಡಿದರು. ಈ ವೇಳೆ ತುಲಾಭಾರ ಮಾಡಿಸಿಕೊಂಡ ನಂದಿ ವೇದಿಕೆಯನ್ನೇರಿ ಶ್ರೀಗಳ ಆಶೀರ್ವಾದ ಪಡೆದದ್ದು ಎಲ್ಲರ ಗಮನ ಸೆಳೆಯಿತು. ಮಾಗಣಗೇರಿಯ ಡಾ.ವಿಶ್ವಾರಾಧ್ಯ ಶಿವಾಚಾರ್ಯರು, ಗುಂಡಕನಾಳ ಹಿರೇಮಠದ ಗುರುಲಿಂಗ ಶಿವಾಚಾರ್ಯರು, ಆಲಮೇಲದ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರು, ಹಿರೂರು ಹಿರೇಮಠದ ಜಯಸಿದ್ದೇಶ್ವರ ಶಿವಾಚಾರ್ಯರು, ಸಿಂದಗಿಯ ವಿಶ್ವಪ್ರಭು ಶಿವಾಚಾರ್ಯರು ಮಾತನಾಡಿದರು.

ಅಖಿಲ ಭಾರತ ವೀರಶೈವ ಶಿವಾಚಾರ್ಯರ ಸಂಸ್ಥೆಯ ಅಧ್ಯಕ್ಷರಾದ ಸಿಂದಗಿ ಸಾರಂಗಮಠದ ಪ್ರಭುಸಾರಂಗದೇವ ಶಿವಾಚಾರ್ಯರು, ಕಲಕೇರಿಯ ಗುರುಮರುಳಾರಾಧ್ಯರ ಹಿರೇಮಠದ ಸಿದ್ಧರಾಮ ಶಿವಾಚಾರ್ಯರು, ಪಂಚರಂಗ ಸಂಸ್ಥಾನ ಗದ್ದುಗೇಮಠದ ಶ್ರೀಗುರುಮಡಿವಾಳೇಶ್ವರ ಶಿವಾಚಾರ್ಯರು. ದೇವರಭೂರದ ಅಭಿನವ ಗಜದಂಡ ಶಿವಾಚಾರ್ಯರು, ಹೆಡಗಾಪೂರದ ದಾರುಕಾಲಿಂಗ ಶಿವಾಚಾರ್ಯರು, ಮುತ್ತಗಿಯ ವೀರರುದ್ರಮುನಿ ಶಿವಾಚಾರ್ಯರು, ಮುಖಂಡರಾದ ಬಸನಗೌಡ ಪಾಟೀಲ ಯಡಿಯಾಪೂರ, ಸುರೇಶಗೌಡ ನಾಡಗೌಡ (ಬಿಂಜಲಭಾವಿ), ಸಿದ್ದು ಬುಳ್ಳಾ ಹಾಗೂ ಹಲವಾರು ಗಣ್ಯಮಾನ್ಯರು ಉಪಸ್ಥಿತರಿದ್ದರು.